# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ನ್ಯಾಯಯುತವಾಗಿ ಧರ್ಮಮಾರ್ಗದಲ್ಲಿ ನಡೆಯುವ
ವ್ಯಕ್ತಿಯ ಶುದ್ಧ ಮನಸ್ಸು ಶಾಂತವಾಗಿರುತ್ತದೆ.
ಆ ವ್ಯಕ್ತಿ ನೆಮ್ಮದಿಯ ಬದುಕನ್ನು ಕಾಣುತ್ತಾನೆ..
ಅಧರ್ಮದ ದಾರಿಯಲ್ಲಿ ನಡೆದೂ, ಸನ್ಮಾನಕ್ಕೆ
ಒಳಗಾಗುವವನ ಮನಸ್ಸು ಗೊಂದಲಕ್ಕೀಡಾಗುತ್ತದೆ
ಅವನು ಸುಖಮಯ ಜೀವನ ನಡೆಸಲು ಸಾಧ್ಯವಿಲ್ಲ..
ಅನೇಕ ಪಾಪಕರ್ಮಗಳನ್ನು ಹೊತ್ತುಕೊಂಡು
ಸೃಷ್ಟಿಯಲ್ಲಿ ಜನಿಸಿದರೂ, ಅವನ ನಡತೆಯಿಂದ
ಮತ್ತು ಆತ ಮಾಡುವ ಉತ್ತಮ ಕಾರ್ಯಗಳಿಂದ
ಆತನ ಪಾಪ ಪುಣ್ಯಗಳನ್ನು ಅಳೆಯಲಾಗುತ್ತದೆ..

**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 07-08-2026 to 13-08-2026 ಬೆಲೆ:10-00 ಸಂಪುಟ–1 ಸಂಚಿಕೆ–45 ಪುಟಗಳು–6









ಇಂದು ಹೆಚ್ಚುತ್ತಿರುವ ಜನದಟ್ಟನೆಗೆ ತಕ್ಕಂತೆ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗಳು ಭರಾಟೆಯಿಂದ ಸಾಗುತ್ತಿವೆ. ಗುಡ್ಡಗಳನ್ನು ಕಡಿದು ರಸ್ತೆ ನಿರ್ಮಿಸುವಾಗ ವೈಜ್ಞಾನಿಕ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸಬೇಕಿದೆ. ಇಲ್ಲದಿದ್ದರೆ ಮುಂಗಾರು ಅಥವಾ ಇತರೆ ಸಂದರ್ಭಗಳಲ್ಲಿ ಗುಡ್ಡ ಕುಸಿತ ಸಂಭವಿಸಿ ಸಂಚಾರಕ್ಕೆ ತೀವ್ರ ಅಡ್ಡಿಯಾಗುವುದಲ್ಲದೆ ಅಪಾಯ ಆಹ್ವಾನಿಸಿದಂತಾಗುತ್ತದೆ. ಇದಕ್ಕೆ ಜೀವಂತ ನಿದರ್ಶನವೆಂಬಂತೆ ಅಪಾಯಕಾರಿ ಸ್ಥಿತಿಯಲ್ಲಿರುವ ಮಂಗಳೂರು–ಮೂಡಬಿದ್ರೆ ಹೆದ್ದಾರಿಯ ಕತ್ತಿಕಲ್ ಭಾಗದ ಗುಡ್ಡ ಕುಸಿತದ ದೃಶ್ಯ.

## ಧರ್ಮವನ್ನು ಗುತ್ತಿಗೆ ಪಡೆದಿರುವವರು ಬದಲಾವಣೆ ತಂದಿದ್ದಾರಾ–ಸಿಎಂ



**ಬೆಂಗಳೂರು:** ಧರ್ಮವನ್ನು ಗುತ್ತಿಗೆ ಪಡೆದಿರುವವರು, ನಿಮ್ಮ ಬದುಕಿನಲ್ಲಿ ಬದಲಾವಣೆ ತಂದಿದ್ದಾರಾ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪ್ರಶ್ನಿಸಿದ್ದಾರೆ. ಕರ್ನಾಟಕ ರಾಜ್ಯ ಮುಜರಾಯಿ ದೇವಾಲಯಗಳ ಆರ್ಚಕರ ಆಗಮಿಕರ ಮತ್ತು ನೌಕರರ ಸಂಘ ಬೆಂಗಳೂರಿನಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಬೃಹತ್ ಸಮಾವೇಶ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರ ಅಭಿನಂದನಾ ಸಮಾರಂಭವನ್ನು ಶಿವಕುಮಾರ್ **3ನೇ ಪುಟಕ್ಕೆ**

## ಪೇಮೆಂಟ್ ಕೋಟಾದಲ್ಲಿ ಸಚಿವರು ಸಂಪುಟಕ್ಕೆ –ಬಿ.ವೈ.ವಿ

**ಬೆಂಗಳೂರು:** ಈ ಸಚಿವ ಸಂಪುಟ ವಿಸ್ತರಣೆ ರಾಜ್ಯದ ಹಿತದೃಷ್ಟಿಯಿಂದ ನಡೆದಿಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಧಿಕಾರದ ಪೈಪೋಟಿ ಮತ್ತು ಹೈಕಮಾಂಡಿನ ರಾಜಕೀಯ ಸಮೀಕರಣಗಳೇ ಸಚಿವ ಸಂಪುಟ ವಿಸ್ತರಣೆಯ ಹಿಂದಿನ ಪ್ರಮುಖ ಕಾರಣಗಳಾಗಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಕಾಂಗ್ರೆಸ್ ಹೈಕಮಾಂಡ್ ಅಳೆದು ತೂಗಿ ಎರಡು ತಿಂಗಳ **3ನೇ ಪುಟಕ್ಕೆ**




## ದೇಶಕ್ಕೆ ಪ್ರೆಶರ್ ಗ್ರೂಪ್ ಅಗತ್ಯ –ದೀಪ್ಕೆ

ಮಹಾರಾಷ್ಟ್ರ: ದೇಶಕ್ಕೆ ಸದ್ಯದ ಪರಿಸ್ಥಿತಿಯಲ್ಲಿ ಒತ್ತಡದ ಗುಂಪಿನ (Pressure group) ಅಗತ್ಯವಿದೆ. ಕಾಕ್ರೋಚ್ ಜನತಾ ಪಕ್ಷ ಸದ್ಯಕ್ಕೆ ಆ ಪಾತ್ರ ನಿಭಾಯಿಸಲಿದೆ ಎಂದು ಪಕ್ಷದ ಸಂಸ್ಥಾಪಕ ಅಭಿಜೀತ್ ದಿಪ್ಕೆ ತಿಳಿಸಿದ್ದಾರೆ. ಮಹಾರಾಷ್ಟ್ರದ ಛತ್ರಪತಿ ಸಂಭಾಜಿ ನಗರದಲ್ಲಿ ಕಾಕ್ರೋಚ್ ಜನತಾ ಪಕ್ಷದ ಪ್ರಮುಖರ ತಂಡದ ಸಭೆಗೆ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಮಾಧ್ಯಮ ಮತ್ತು ನ್ಯಾಯಾಂಗದಂತಹ ಸಂಸ್ಥೆಗಳ ಮೇಲೆ ಜನರ ನಂಬಿಕೆ ಕ್ಷೀಣಿಸುತ್ತಿವೆ. ಈ ಬಗ್ಗೆ ಪಕ್ಷದ ಸಭೆಯಲ್ಲಿ ಗಮನ ಹರಿಸಲಾಗುವುದು ಎಂದರು. ಸಿಜೆಪಿ ಸಭೆಯಲ್ಲಿ ಎಥನಾಲ್ ಮಿಶ್ರಿತ ಇಂಧನ ಮತ್ತು ಹೆಚ್ಚುತ್ತಿರುವ **3ನೇ ಪುಟಕ್ಕೆ**





# ಪೇಮೆಂಟ್ ಕೋಟಾದಲ್ಲಿ ಸಚಿವರು ಸಂಪುಟಕ್ಕೆ – ಬಿ.ವೈ.ವಿ

ಒಂದನೇ ಪುಟದಿಂದ......

ನಂತರದಲ್ಲಿ ಸಚಿವ ಸಂಪುಟ ವಿಸ್ತರಣೆ ಮಾಡಿದ್ದಾರೆ. ರೇಟ್ ಫಿಕ್ಸ್ ಆಗದೇ ಡೇಟ್ ಫಿಕ್ಸ್ ಆಗುತ್ತಿಲ್ಲ ಎಂದು ನಾನು ಹಲವಾರು ಬಾರಿ ಈ ಹಿಂದೆ ಹೇಳಿದ್ದೇನೆ. ಒಂದೋ ಪೇಮೆಂಟ್ ಕೋಟದಲ್ಲಿ ಅಥವಾ ಮ್ಯಾನೇಜ್ ಮೆಂಟ್ ಕೋಟಾದಡಿ ಸಚಿವ ಸಂಪುಟಕ್ಕೆ ಸೇರಬೇಕಿತ್ತು. ಇವೆರಡನ್ನು ಬಿಟ್ಟರೆ ಮೂರನೇ ಕೋಟಾ ಇರಲಿಲ್ಲ. ಕೆಲವರು ಪೇಮೆಂಟ್ ಕೋಟಾದಲ್ಲಿ ಹಾಗೂ ಇನ್ನೂ ಕೆಲವರು ಮ್ಯಾನೇಜ್‌ಮೆಂಟ್ ಕೋಟಾದಡಿ ಸಚಿವ ಸಂಪುಟಕ್ಕೆ ಸೇರಿದ್ದಾರೆ ಎಂದು ವಿಶ್ಲೇಷಿಸಿದರು. ನಾಗೇಂದ್ರ ಅವರನ್ನು ಮತ್ತೆ ಸಚಿವರನ್ನಾಗಿಸಿದ್ದು ಯಾಕೆ? ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಚಾರ್ಜ್ ಶೀಟ್ ಸಲ್ಲಿಕೆಯಾಗಿರುವ ಹಾಗೂ ನ್ಯಾಯಾಂಗ ಪ್ರಕ್ರಿಯೆ ಎದುರಿಸುತ್ತಿರುವ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿರುವುದನ್ನು ವಿಜಯೇಂದ್ರ ಪ್ರಶ್ನಿಸಿದರು. ಭ್ರಷ್ಟಾಚಾರ ರಹಿತ ಆಡಳಿತದ ಬಗ್ಗೆ ಮಾತನಾಡುವ ಕಾಂಗ್ರೆಸ್ ತನ್ನದೇ ನೈತಿಕತೆಯನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದರು. ಸಚಿವ ಸ್ಥಾನ ನೀಡದಿದ್ದರೆ ಕಾಂಗ್ರೆಸ್ ಹೈಕಮಾಂಡ್‌ಗೆ ಸಂಬಂಧಿಸಿದ ಮಾಹಿತಿಯನ್ನು ಬಹಿರಂಗಪಡಿಸುವುದಾಗಿ ನಾಗೇಂದ್ರ ಅವರು ಬೆದರಿಕೆ ಹಾಕಿದ ಬಳಿಕವೇ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಕುರಿತು ಕಾಂಗ್ರೆಸ್ ನಾಯಕರು ಸಾರ್ವಜನಿಕರಿಗೆ ಸ್ಪಷ್ಟನೆ ನೀಡಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು. ಈ ಬಗ್ಗೆ ಪ್ರತಿಕ್ರಿಯಿಸಿರುವ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಚಿವ ನಾಗೇಂದ್ರ ಅವರ ಮೇಲಿನ ಪ್ರಕರಣ ಕೋರ್ಟಿನಲ್ಲಿ ವಿಚಾರಣೆ ಹಂತದಲ್ಲಿದೆ. ಅವರು ದೆಹಲಿಗೂ ಹೋಗುವಂತಿಲ್ಲ. ಇಂಥ ಕಳಂಕಿತರು ಮಂತ್ರಿಮಂಡಲದಲ್ಲಿ ಇರಲು ಸಾಧ್ಯವಿಲ್ಲ. ಅವರು ರಾಜೀನಾಮೆ ಕೊಡುವವರೆಗೆ ನಾವು ವಿರಮಿಸುವುದಿಲ್ಲ. ಅಲ್ಲದೆ, ಅಧಿವೇಶನ ನಡೆಸಲು ಬಿಡುವುದಿಲ್ಲ ಎಂದು ಎಚ್ಚರಿಸಿದ್ದಾರೆ.

# ಧರ್ಮವನ್ನು ಗುತ್ತಿಗೆ ಪಡೆದಿರುವವರು ಬದಲಾವಣೆ ತಂದಿದ್ದಾರಾ – ಸಿಎಂ

ಒಂದನೇ ಪುಟದಿಂದ......

ಅವರು ಉದ್ಘಾಟಿಸಿ ಮಾತನಾಡಿದ ಅವರು, ರಾಮಲಿಂಗಾರೆಡ್ಡಿ ಅವರನ್ನು ದೇವರ ಬಳಿ ಕರೆದೊಯ್ದು ಈ ಸರ್ಕಾರ ಇನ್ನು ಹತ್ತು ವರ್ಷ ಅಧಿಕಾರದಲ್ಲಿ ಇರಬೇಕು ಎಂದು ಪ್ರಾರ್ಥನೆ ಮಾಡಿ, ಸಂಕಲ್ಪ ಮಾಡಿದ್ದು ನನಗೆ ಬಹಳ ಸಂತೋಷ ತಂದಿದೆ. ಈ ಧರ್ಮವನ್ನು ಕೆಲವು ಪಕ್ಷದವರು ಗುತ್ತಿಗೆ ಪಡೆದಿದ್ದಾರೆ. ಆದರೆ ಅವರು ಮಾಡೋದು, ಖಾಲಿ ಬುಟ್ಟಿ, ಬೇವಿನ ಸೊಪ್ಪು ನಂದೆ ಬೆಳಗೋ ಪೂಜಾರಿಎಂಬಂತೆ ಖಾಲಿ ಟ್ರಂಕು. ಶಾಲು ಹಾಕಿಕೊಂಡು ದೇವರು, ಧರ್ಮ ಎಲ್ಲವೂ ನಮ್ಮದೇ ಎನ್ನುತ್ತಾರೆ. ನಾನು, ರಾಮಲಿಂಗಾರೆಡ್ಡಿ ಹಿಂದೂಗಳಲ್ಲವೇ. ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಅವರು ಹಿಂದೂ ಅಲ್ಲವೇ ಎಂದು ಪ್ರಶ್ನಿಸಿದರು. ಬೇರೆ ಸರ್ಕಾರಗಳ ಅವಧಿಯಲ್ಲಿ ನಿಮ್ಮ ಬದುಕಿನಲ್ಲಿ ಬದಲಾವಣೆ ತಂದಿದ್ದರೆ ನಾವು ಪ್ರಶ್ನೆ ಮಾಡುತ್ತಿರಲಿಲ್ಲ. ನಾವು ನಮ್ಮ ಕೆಲಸಕ್ಕೆ ಕೂಲಿ ಕೇಳುತ್ತೇವೆ. ಅವರು ಕೇವಲ ಶಾಲು ಹಾಕಿಕೊಂಡು ರಾಮರಾಮ ಎಂದಾಕ್ಷಣ ಅವರು ಧರ್ಮ ರಕ್ಷಕರೇ. ರಾಮ ಮಂದಿರಕ್ಕೆ ನಾವು ನೀವೆಲ್ಲರೂಇಟ್ಟಿಗೆ ಕಾಸು ದೇಣಿಗೆ ನೀಡಿದೆವು. ಅದೆಲ್ಲವೂ ಏನಾದವು? ಈಗ ಮರ್ಯಾದೆ ಹೋಗಿಲ್ಲವೇ. ನಿಮಗೆ ಯಾವುದೇ ಕಾರಣಕ್ಕೂ ಅವಮಾನವಾಗಬಾರದು ಎಂದು ನಾವು ತೀರ್ಮಾನಿಸಿ ದೊಡ್ಡ ದೇವಾಲಯಗಳ ಹುಂಡಿ ಬಳಿ ಹಾಗೂ ಅದರ ಹಣತೆಗೆಯುವಾಗ ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಮುಂದಾಗಿದ್ದೇವೆ. ನಿಮಗೆ ದೇವರದುಡ್ಡು ತಿನ್ನುವ ಆಸೆ ಇಲ್ಲ ಎಂದು ನನಗೆ ಗೊತ್ತಿದೆ. ಬಡವರು ಯಾರೂ ಇಂತಹ ಕೆಲಸ ಮಾಡುವುದಿಲ್ಲ ಎಂದು ತಿಳಿಸಿದರು.

# ದೇಶಕ್ಕೆ ಪ್ರೆಶರ್ ಗ್ರೂಪ್ ಅಗತ್ಯ – ದೀಪ್ಕೆ

ಒಂದನೇ ಪುಟದಿಂದ......

ನಿರುದ್ಯೋಗದಂತಹ ವಿಷಯಗಳನ್ನೂ ಕೈಗೆತ್ತಿಕೊಳ್ಳಲಾಗುವುದು. ಸದ್ಯಕ್ಕೆ ಸಿಜೆಪಿ ಒಂದು ಒತ್ತಡ ಹೇರುವ ಗುಂಪಾಗಿರುತ್ತದೆ. ದೇಶದ ಈ ತೆರನಾದ ವ್ಯವಸ್ಥೆಯ ಅಗತ್ಯವಿದೆ ಎಂದು ದಿಪ್ಕೆ ಪ್ರತಿಪಾದಿಸಿದರು. ಸಿಜೆಪಿ ಮುಖ್ಯ ವಕ್ತಾರ ಸೌರವ್‌ದಾಸ್ ಮಾತನಾಡಿ, ಶಿಕ್ಷಣ ತಜ್ಞ, ಸಾಮಾಜಿಕ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರು ತಮ್ಮ ಮಾರ್ಗದರ್ಶಕರಾಗಿ ಮುಂದುವರಿಯಲಿದ್ದಾರೆ. ಅವರಿಂದ ಸಲಹೆ ಪಡೆಯಲಾಗುವುದು ಎಂದು ತಿಳಿಸಿದರು. ನೀಟ್ ಪೇಪರ್ ಸೋರಿಕೆ ಮತ್ತು ಇತರ ಪರೀಕ್ಷಾ ಅಕ್ರಮಗಳ ವಿರುದ್ಧ ಸಿಜೆಪಿ ನೇತೃತ್ವದಲ್ಲಿ ಇತ್ತೀಚೆಗೆ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ಮೇಲೆ ದಾಖಲಾಗಿರುವ ಕೇಸ್‌ಗಳನ್ನು ವಾಪಸ್ ಪಡೆಯುವಕುರಿತಾಗಿ ಸರ್ಕಾರದ ಪ್ರತಿನಿಧಿಗಳ ಜೊತೆ ಮಾತನಾಡುತ್ತಿದ್ದೇವೆ. ದೇಶಾದ್ಯಂತ ನಡೆದ ಹೋರಾಟಗಳಲ್ಲಿ ಗಾಯಗೊಂಡ ಪ್ರತಿಭಟನಾಕಾರರಿಗೆ ಕಾನೂನು ಮತ್ತು ವೈದ್ಯಕೀಯ ನೆರವು ನೀಡುವ ಕೆಲಸ ಮಾಡುತ್ತಿದ್ದೇವೆ ಎಂದು ದಾಸ್ ತಿಳಿಸಿದರು. ನೀಟ್–ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧದ ಆಂದೋಲನದ ನೇತೃತ್ವ ವಹಿಸಲು ಕಾಕ್ರೋಚ್ ಜನತಾ ಪಕ್ಷದ ಸಂಸ್ಥಾಪಕ ದಿಪ್ಕೆ ಜೂನ್‌ನಲ್ಲಿ ಅಮೆರಿಕದಿಂದ ಭಾರತಕ್ಕೆ ಆಗಮಿಸಿ ದೆಹಲಿಯಜಂತರ್ ಮಂತರ್‌ನಲ್ಲಿ ಶಾಂತಿಯುತ ಪ್ರತಿಭಟನೆ ಆರಂಭಿಸಿದ್ದರು.35 ದಿನಗಳ ಸತತ ಹೋರಾಟದ ಬಳಿಕ ಸಂಸತ್ ಮುತ್ತಿಗೆಯತ್ನ, ಪ್ರತಿಭಟನಾರ್ಯಾಲಿ ನಡೆಸಲಾಯಿತು. ಪೊಲೀಸರ ನಡುವೆ ತಿಕ್ಕಾಟ ನಡೆಯಿತು.

# ಬ್ರಾಹ್ಮಣರಿಗೆ ಸ್ವ ಉದ್ಯಮ ನೇರ ಸಾಲ : ಅರ್ಜಿ ಆಹ್ವಾನ

ಮಂಗಳೂರು – ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ನೇರ ಸಾಲ ನೀಡಲು ಉದ್ದೇಶಿಸಿದೆ. https://ksbdb.co.in/Loan/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ದೂರವಾಣಿ ಸಂಖ್ಯೆ 8029605888, 8762249230 ಅಥವಾ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿ (0824–2453222) ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮುಕ್ತ ವಿ.ವಿ ಕೋರ್ಸ್: ಅವಧಿ ವಿಸ್ತರಣೆ

ಮಂಗಳೂರು : ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಂದ 2026–27ನೇ ಸಾಲಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದ ಪದವಿ ಶಿಕ್ಷಣದಿಂದ ವಂಚಿತರಾಗಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ದೂರ ಶಿಕ್ಷಣ ಮಾದರಿ ಕೋರ್ಸ್‌ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 10ರವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ (08242433078), (08255232470), (0826295335), (08251237078), (08257230666) ಸಂಪರ್ಕಿಸಬಹುದು.

# ಕಾನೂನು ತರಬೇತಿ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾನೂನು ಪದವಿಯಲ್ಲಿ ಉತ್ತೀರ್ಣರಾದ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ ಅಭ್ಯರ್ಥಿಗಳಿಗೆ 2026–27ನೇ ಸಾಲಿನಿಂದ ನಾಲ್ಕು ವರ್ಷಗಳ ತರಬೇತಿ ಅವಧಿಯಲ್ಲಿ ಶಿಷ್ಯವೇತನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯೊಂದಿಗೆ ಸೂಕ್ತ ದಾಖಲೆಗಳನ್ನು ಲಗತ್ತಿಸಿದ ಆ. 31 ರೊಳಗಾಗಿ ಸಲ್ಲಿಸಬೇಕು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗೆ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, 1ನೇ ಮಹಡಿ, ಸತ್ಯಶ್ರೀ ಆರ್ಕೇಡ್, 5ನೇ ಪ್ಯಾರಲ್ ರಸ್ತೆ, ದುರ್ಗಿಗುಡಿ, ಶಿವಮೊಗ್ಗ ದೂರವಾಣಿ ಸಂಖ್ಯೆ : 08182–220206ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಮೀನುಗಾರಿಕೆ ಇಲಾಖೆಯ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಮೀನುಗಾರಿಕೆ ಇಲಾಖೆಯ 2026–27ನೇ ಸಾಲಿನ ಜಿಲ್ಲಾವಲಯ ಯೋಜನೆಯಡಿ ಅರ್ಹ ಫಲಾನುಭವಿಗಳಿಂದ ವಿವಿಧ ಯೋಜನೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳನ್ನು ಅಥವಾ ಕೆಳಗಿನ ಮೊಬೈಲ್ ಸಂಖ್ಯೆಗಳಾದ ಶಿವಮೊಗ್ಗ: 9986040981, ಭದ್ರಾವತಿ: 9743370815, ಶಿಕಾರಿಪುರ: 9686939028, ಸಾಗರ: 95380 44365, ಸೊರಬ : 9535386449, ತೀರ್ಥಹಳ್ಳಿ: 8655132438 ಸಂಪರ್ಕಿಸಬಹುದು.

# ಕಥೆ ಹಾಗೂ ಪ್ರಬಂಧ ಸ್ಪರ್ಧೆಗೆ ಅರ್ಜಿ ಆಹ್ವಾನ

ಮಡಿಕೇರಿ : ಮಂಡ್ಯ ಜಿಲ್ಲೆಯ ರಾಜ್ಯ ಮಟ್ಟದ ಕನ್ನಡ ಮಾಸ ಪತ್ರಿಕೆ ಜೀವನಾಡಿ ಪತ್ರಿಕೆಯು ರಾಜ್ಯ ಮಟ್ಟದ ಕನ್ನಡ ಸಾಹಿತ್ಯ ಸ್ಪರ್ಧೆ 2026 ಏರ್ಪಡಿಸಿದ್ದು ರಾಜ್ಯ ಮಟ್ಟದ ಜೀವನಾಡಿ ಕನ್ನಡ ಕಥಾ ಸ್ಪರ್ಧೆ, ಕನ್ನಡ ಪ್ರಬಂಧ ಸ್ಪರ್ಧೆ ಮತ್ತು ಕನ್ನಡ ಕವನ ಸ್ಪರ್ಧೆ ಏರ್ಪಡಿಸಿದೆ. ಹೆಚ್ಚಿನ ವಿವರಗಳಿಗೆ ಡಾ. ಎಚ್.ಎಸ್ ಮುದ್ದೇಗೌಡ 98451 98098 ಅಥವಾ ಎಂ.ಪಿ ಕೇಶವ ಕಾಮತ್ 94483 46276 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

# ಮೊಳಹಳ್ಳಿ ಶಿವರಾಯರು ಜನ್ಮ ದಿನಾಚರಣೆ



ಮಂಗಳೂರು : ಸಹಕಾರ ರಂಗದ ಮೂಲಕ ಜಿಲ್ಲೆಯ ವಿವಿಧ ಕ್ಷೇತ್ರ ಗಳ ಅಭಿವೃದ್ಧಿ ಸಾಧ್ಯ ಎನ್ನುವುದನ್ನು ಮೊಳಹಳ್ಳಿ ಶಿವರಾಯರು ತೋರಿಸಿಕೊಟ್ಟಿದ್ದಾರೆ. ಅವರ ಸಹಕಾರಿ ರಂಗದ ಮೂಲಕ ಮಾಡಿದ ಕೆಲಸಗಳು ನಮಗೆ ಇಂದಿಗೂ ಮಾದರಿ ಎಂದು ದಕ್ಷಿಣಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಿನ ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಅಧ್ಯಕ್ಷರಾದ ಸಹಕಾರರತ್ನ ಡಾ.ಎಂ.ಎನ್. ರಾಜೇಂದ್ರ ಕುಮಾರ್ ತಿಳಿಸಿದ್ದಾರೆ. ಎಸ್ ಸಿಡಿಸಿಸಿ ಬ್ಯಾಂಕ್‌ನ ಸಭಾಂಗಣದಲ್ಲಿ ಮೊಳಹಳ್ಳಿ ಶಿವರಾಯರ ಜನ್ಮ ದಿನಾಚರಣೆಗೆ ಚಾಲನೆ ನೀಡಿ, ಅರವಿಂದ ಚೊಕ್ಕಾಡಿಯವರು ಬರೆದ ಮೊಗೆದಷ್ಟು ಬೆಳೆಯುವ ಮೊಳಹಳ್ಳಿ ಕೃತಿ ಬಿಡುಗಡೆಗೊಳಿಸಿ ಮಾತನಾಡುತ್ತಾ, ಮೊಳಹಳ್ಳಿ ಶಿವರಾಯರು ಆರು ದಶಕಗಳ ಕಾಲ ಸಹಕಾರಿ ರಂಗವನ್ನು ಕಟ್ಟಿ ಬೆಳೆಸಿ, ಸಹಕಾರಿ ರಂಗದ ಮೂಲಕ ಏನೆಲ್ಲಾ ಮಾಡಬಹುದು ಅದನ್ನು ಮಾಡಿ ತೋರಿಸಿದ್ದಾರೆ ಎಂದರು.

# ದ.ಕ. ಜಿಲ್ಲಾ ಸಹಕಾರಿ ಯೂನಿಯನ್ ರಾಜ್ಯದಲ್ಲೇ ಪ್ರಥಮ ಸ್ಥಾನ !



ಮಂಗಳೂರು : ಮಂಗಳೂರಿನ ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಯೂನಿಯನ್ 2025–26ನೇ ಆರ್ಥಿಕ ವರ್ಷದಲ್ಲಿ 14.19ಲಕ್ಷ ರೂಪಾಯಿಗಳ ಸಾರ್ವಕಾಲಿಕ ಗರಿಷ್ಠ ಲಾಭ ಗಳಿಸುವ ಮೂಲಕ ರಾಜ್ಯದಲ್ಲೇ ಪ್ರಥಮ ಸ್ಥಾನ ಪಡೆದು ಹೊಸ ಇತಿಹಾಸ ನಿರ್ಮಿಸಿದೆ. ಎಸ್‌ಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ 'ಸಹಕಾರ ರತ್ನ' ಡಾ. ಎಂ.ಎನ್. ರಾಜೇಂದ್ರ ಕುಮಾರ್ ಅವರ ಮಾರ್ಗದರ್ಶನದಲ್ಲಿ ಮತ್ತು ನಿರ್ದೇಶಕ ಶಶಿ ಕುಮಾರ್ ರೈ ಬಾಲ್ಯೊಟ್ಟು ಅವರ ಕ್ರಿಯಾಶೀಲ ನಾಯಕತ್ವದಲ್ಲಿ ಯೂನಿ ಯನ್ ಈ ಅಪರೂಪದ ಸಾಧನೆಗೆ ಪಾತ್ರವಾಗಿದೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆದಾಯ ಮತ್ತು ಲಾಭ: ವರ್ಷಾಂತ್ಯದಲ್ಲಿ ಯೂನಿಯನ್ 8,91,120 ರೂ. ಸದಸ್ಯತ್ವ ಶುಲ್ಕ ಹಾಗೂ 68,72,929.15 ರೂ. ವಿವಿಧ ನಿಧಿಗಳನ್ನು ಸಂಗ್ರಹಿಸಿದ್ದು, ಒಟ್ಟು 14,19,121 ರೂ. ನಿವ್ವಳ ಲಾಭ ದಾಖಲಿಸಿದೆ.

# ಉಜಿರೆ ರುಡ್‌ಸೆಟ್ ಸಂಸ್ಥೆಯಲ್ಲಿ ಉಚಿತ ಅಣಬೆ ಬೇಸಾಯ ತರಬೇತಿ





ಉಜಿರೆ : ಉಜಿರೆಯ ಸಿದ್ಧವನದಲ್ಲಿರುವ ಪ್ರಸಿದ್ಧ ರುಡ್‌ಸೆಟ್ ಸಂಸ್ಥೆಯು ಸಾರ್ವಜನಿಕರಿಗಾಗಿ 12 ದಿನಗಳ ಉಚಿತ ಅಣಬೆ ಬೇಸಾಯ ತರಬೇತಿ ಶಿಬಿರವನ್ನು ಆಯೋಜಿಸಿದೆ. ಈ ತರಬೇತಿಯು 2026ರ ಆಗಸ್ಟ್ 04 ರಿಂದ ಆಗಸ್ಟ್ 15 ರವರೆಗೆ ನಡೆಯಲಿದ್ದು, ಪ್ರತಿದಿನ ಬೆಳಿಗ್ಗೆ 9:30ರಿಂದ ಸಂಜೆ 5:30ರವರೆಗೆ ತರಬೇತಿ ತರಗತಿಗಳು ನಡೆಯಲಿವೆ. 18 ರಿಂದ 50 ವರ್ಷ ವಯೋಮಿತಿಯೊಳಗಿನ ಆಸಕ್ತ ಅಭ್ಯರ್ಥಿಗಳು ಈ ತರಬೇತಿಯಲ್ಲಿ ಪಾಲ್ಗೊಳ್ಳಲು ಅರ್ಹರಾಗಿರುತ್ತಾರೆ. ತರಬೇತಿಗೆ ಆಗಮಿಸುವ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸ್ಥಳೀಯರು ಪ್ರತಿದಿನ ಮನೆಗೆ ಹೋಗಿ ಬರಲು ಅವಕಾಶವಿರುತ್ತದೆ. ತರಬೇತಿಯಲ್ಲಿ ಭಾಗವಹಿಸಲು ಬಯಸುವವರು ಗೂಗಲ್ ಫಾರ್ಮ್ (https://forms.gle/9LUE1UvHMAv21vRS7) ಲಿಂಕ್ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು.

# ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಿಯಾಯಿತಿ




ಮಂಗಳೂರು : ಸ್ವಾತಂತ್ರ್ಯ ದಿನಾಚರಣೆಯ ಶುಭ ಸಂದರ್ಭದಲ್ಲಿ 20 26ರ ಆಗಸ್ಟ್ ತಿಂಗಳ ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳಿಗೆ ಶೇಕಡಾ 50 ರಷ್ಟು ವಿಶೇಷ ರಿಯಾಯಿತಿ ಘೋಷಿಸ ಲಾಗಿದೆ. ಈ ರಿಯಾಯಿತಿ ಸೌಲಭ್ಯ ವು ಬೆಂಗಳೂರಿನ ಕನ್ನಡ ಭವನದಲ್ಲಿರುವ ಸಿರಿಗನ್ನಡ ಪುಸ್ತಕ ಮಳಿಗೆ (ಸಂಪರ್ಕ: 080–221 07705), ರಾಜ್ಯದ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗಳು ಹಾಗೂ ಪ್ರಾಧಿಕಾರದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಲಭ್ಯವಿರಲಿದೆ. ಇದಲ್ಲದೆ, ಪುಸ್ತಕ ಪ್ರೇಮಿಗಳು ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ (https://kpp.karnataka.gov.in) ಮೂಲಕ ಆನ್‌ಲೈನ್ ನಲ್ಲೂ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದು.

# 'ತ್ಯಾಗಮಯಿ ಮೊಳಹಳ್ಳಿ' ಕೃತಿ ಬಿಡುಗಡೆ ಮಾಡಿದ ಡಾ. ಎಂ. ಎನ್. ಆರ್



ಮಂಗಳೂರು : ಎಸ್‌ಸಿಡಿಸಿಸಿ ಬ್ಯಾಂಕ್‌ನ ಸಭಾಂಗಣದಲ್ಲಿ ಎಸ್. ಜಗದೀಶ್ಚಂದ್ರ ಅಂಚನ್ ಸೂಟರ್‌ಪೇಟೆ ಅವರು ರಚಿಸಿದ 'ತ್ಯಾಗಮಯಿ ಮೊಳಹಳ್ಳಿ' ಕೃತಿಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದ ಡಾ. ಎಂ.ಎನ್.ರಾ, ಮೊಳಹಳ್ಳಿಯಲ್ಲಿ ಜನಿಸಿದ ಶಿವರಾಯರು ತಮ್ಮ ಕಾರ್ಯಕ್ಷೇತ್ರವಾಗಿ ಪುತ್ತೂರು ಮತ್ತು ಮಂಗಳೂರನ್ನು ಆಯ್ಕೆ ಮಾಡಿಕೊಂಡಿದ್ದರು. ವಕೀಲ ವೃತ್ತಿಯಲ್ಲಿದ್ದ ಅವರು ಸುಮಾರು 60 ವರ್ಷಗಳ ಕಾಲ ಸಹಕಾರಿ ರಂಗದ ಬೆಳವಣಿಗೆಗಾಗಿ ಶ್ರಮಿಸಿದ್ದಾರೆ. ಅವರ ಪರಿಶ್ರಮದ ಫಲವಾಗಿಯೇ ಇಂದು ಸಹಕಾರಿ ಕ್ಷೇತ್ರವು ವಿಸ್ತಾರವಾಗಿ ಬೆಳೆದು ನಿಂತಿದೆ. ಈ ಸಂದರ್ಭದಲ್ಲಿ ಎಸ್. ಜಗದೀಶ್ಚಂದ್ರ ಅಂಚನ್ ಅವರು ಇಂತಹ ಮಹತ್ವದ ಕೃತಿಯನ್ನು ರಚಿಸಿರುವುದು ಅಭಿನಂದನೀಯ ಎಂದು ಅವರು ಹೇಳಿದರು.

# ಹಿರಿಯ ವಿದ್ಯಾರ್ಥಿಗಳಿಂದ ಹಲ್ಲೆ : ರಾಗಿಂಗ್ ಶಂಕೆ



ಮಂಗಳೂರು: ನಗರದ ಕಾಲೇಜೊಂದರ ಪ್ರಥಮ ವರ್ಷದ ವಿದ್ಯಾರ್ಥಿಗಳಿಬ್ಬರ ಮೇಲೆ ಹಿರಿಯ ವಿದ್ಯಾರ್ಥಿಗಳು ಹಲ್ಲೆ ನಡೆಸಿರುವ ಘಟನೆ ಗುಜ್ಜರಕೇರೆಯ ಬಳಿ ಮಂಗಳವಾರ ನಡೆದಿದೆ. ಘಟನೆಯಲ್ಲಿ ಗಾಯಗೊಂಡ ವಿದ್ಯಾರ್ಥಿಗಳು ನಗರದ ಹೈಲ್ಯಾಂಡ್ ಆಸ್ಪತ್ರೆಗೆ ದಾಖಲಾಗಿದ್ದು, ಮೇಲ್ನೋಟಕ್ಕೆ ಇದೊಂದು ರಾಗಿಂಗ್ ಪ್ರಕರಣದಂತೆ ಕಂಡುಬರುತ್ತಿದೆ ಎಂದು ಮಂಗಳೂರು ನಗರ ಪೊಲೀಸ್ ಕಮಿಷನರ್ ಸ್ಪಷ್ಟಪಡಿಸಿದ್ದಾರೆ. ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಇಬ್ಬರು ವಿದ್ಯಾರ್ಥಿಗಳ ಮೇಲೆ, ದ್ವಿತೀಯ ವರ್ಷದ ಸುಮಾರು ನಾಲ್ವರು ಹಿರಿಯ ವಿದ್ಯಾರ್ಥಿಗಳು ಗುಜ್ಜರಕೇರೆಯ ಚಹಾ ಅಂಗಡಿಯೊಂದರ ಬಳಿ ಏಕಾಏಕಿ ಹಲ್ಲೆ ನಡೆಸಿ ದ್ದಾರೆ. ಹಲ್ಲೆಯಿಂದ ಗಾಯಗೊಂಡ ವಿದ್ಯಾರ್ಥಿಗಳನ್ನು ತಕ್ಷಣವೇ ಹೈಲ್ಯಾಂಡ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

# ಕಾಲೇಜು ಆವರಣದಲ್ಲಿ ಗಾಂಜಾ ಪತ್ತೆ : ಮೂವರ ಬಂಧನ



ಮಂಗಳೂರು: ನಗರದ ಕಾಲೇಜಿನಲ್ಲಿ ತೀವ್ರಗೊಳಿಸಿದ ಕಣ್ಗಾವಲು ಮತ್ತು ಸಕ್ರಿಯ ತಪಾಸಣೆಯ ಫಲವಾಗಿ, ಸಣ್ಣಪುಟ್ಟ ಪಾಕೆಟ್‌ಗಳಲ್ಲಿ ತುಂಬಿದ್ದ ಸುಮಾರು 290 ಗ್ರಾಂ ಗಾಂಜಾವನ್ನು ಹೊಂದಿದ್ದ ಮೂವರು ವಿದ್ಯಾರ್ಥಿಗಳನ್ನು ಕಾಲೇಜು ಆಡಳಿತ ಮಂಡಳಿಯು ರೆಡ್‌ಹ್ಯಾಂಡ್ ಆಗಿ ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಪ್ರಮುಖ ಘಟನೆ ವರದಿಯಾಗಿದೆ. ಮಾದಕ ದ್ರವ್ಯ ವಿರೋಧಿ ಜಾಗೃತಿ ಅಭಿಯಾನಗಳ ನಂತರ ಕಾಲೇಜುಗಳು ತಮ್ಮ ಭದ್ರತೆ ಮತ್ತು ಮೇಲ್ವಿಚಾರಣಾ ವ್ಯವಸ್ಥೆಯನ್ನು ಹೆಚ್ಚು ಬಿಗಿಗೊಳಿಸಿವೆ. ಇದರ ಭಾಗವಾಗಿ ನಡೆಸಿದ ತಪಾಸಣೆಯಲ್ಲಿ ಈ ಮೂವರು ವಿದ್ಯಾರ್ಥಿಗಳು ಸಿಕ್ಕಿಬಿದ್ದಿದ್ದಾರೆ. ಕೂಡಲೇ ಪೊಲೀಸರಿಗೆ ಮಾಹಿತಿ ನೀಡಲಾಗಿದ್ದು, ವೈದ್ಯಕೀಯ ತಪಾಸಣೆಯಲ್ಲಿ ಮೂವರೂ ಗಾಂಜಾ ಸೇವಿಸಿರುವುದು ದೃಢಪಟ್ಟಿದೆ ಎಂದು ಪೊಲೀಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕತಾರ್, ಒಮಾನ್, ನೈಜೀರಿಯಾಗೆ ತುಳುವ ಮಹಾಸಭೆ ಅಧ್ಯಕ್ಷರ ನೇಮಕ



ಮಂಗಳೂರು: 'ತುಳುವ ಮಹಾಸಭೆ ಇಂಟರ್ನ್ಯಾಷನಲ್', ತನ್ನ ಅಂತರರಾಷ್ಟ್ರೀಯ ಸಂಘಟನಾ ವಿಸ್ತರಣೆಯ ಭಾಗವಾಗಿ ಕತಾರ್, ಒಮಾನ್ ಹಾಗೂ ನೈಜೀರಿಯಾ ಘಟಕಗಳಿಗೆ ನೂತನ ಅಧ್ಯಕ್ಷರನ್ನು ನೇಮಕ ಮಾಡಿದೆ. ಸಂಸ್ಥೆಯ ಅಂತರರಾಷ್ಟ್ರೀಯ ಅಧ್ಯಕ್ಷ ಸರ್ವೋತ್ತಮ ಶೆಟ್ಟಿ ಈ ನೇಮಕಾತಿಗಳನ್ನು ಪ್ರಕಟಿಸಿದ್ದಾರೆ. ಕತಾರ್ ಘಟಕದ ಅಧ್ಯಕ್ಷರಾಗಿ ಪ್ರಖ್ಯಾತ ಉದ್ಯಮಿ ಹಾಗೂ ಎ.ಟಿ.ಎಸ್. ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕ ಡಾ. ಮೂಡಂಬೈಲ್ ರವಿ ಶೆಟ್ಟಿ, ಒಮಾನ್ ಘಟಕದ ಅಧ್ಯಕ್ಷರಾಗಿ ಅಬೀರ್ ಗ್ರೂಪ್ ಆಫ್ ಕಂಪನೀಸ್‌ನ ಸಂಸ್ಥಾಪಕ–ವ್ಯವಸ್ಥಾಪಕ ನಿರ್ದೇಶಕ ಮಲ್ಲಾರ್ ಶಶಿಧರ ಶೆಟ್ಟಿ ಮತ್ತು ನೈಜೀರಿಯಾ ಘಟಕದ ಅಧ್ಯಕ್ಷರಾಗಿ ಎವರೆಸ್ಟ್ ಮೆಟಲ್ಸ್ ಸಂಸ್ಥೆಯ ಖರೀದಿ ಪ್ರಬಂಧಕ ಹಾಗೂ ಸಾಂಸ್ಕೃತಿಕ ಸಂಘಟಕ ಶರತ್ ಕುಮಾರ್ ಶೆಟ್ಟಿ ನೇಮಕಗೊಂಡಿದ್ದಾರೆ.

# ಶಾಶ್ವತ ಪರಿಹಾರಕ್ಕೆ ಸಂಸದ ಕ್ಯಾ. ಚೌಟ ಒತ್ತಾಯ



ನವದೆಹಲಿ: ಲೋಕಸಭೆಯ ನಿಯಮ 377ರ ಅಡಿಯಲ್ಲಿ ದಕ್ಷಿಣಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಸೇವಾ ನಿವೃತ್ತ ಯೋಧರು ಹಾಗೂ ಅವರ ಕುಟುಂಬಸ್ಥರ ವೈದ್ಯಕೀಯ ಭದ್ರತೆಯ ಪರವಾಗಿ ಧ್ವನಿಯೆತ್ತಿದ್ದಾರೆ. ಮಾಜಿ ಸೈನಿಕರ ಕೊಡುಗೆ ಆರೋಗ್ಯ ಯೋಜನೆ (ECHS) ಯಡಿಯಲ್ಲಿ ನೋಂದಾಯಿತ ಆಸ್ಪತ್ರೆಗಳ ಕ್ಲೈಮ್‌ಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಲು ರಕ್ಷಣಾ ಸಚಿವಾಲಯವು ಶಾಶ್ವತ ವ್ಯವಸ್ಥೆ ರೂಪಿಸಬೇಕೆಂದು ಆಗ್ರಹಿಸಿದ್ದಾ ರೆ. ಒಬ್ಬ ಯೋಧನಾಗಿ ಹಾಗೂ ಪ್ರಸ್ತುತ ಸಂಸದನಾಗಿ ಸೇನಾ ನಿವೃತ್ತ ಯೋಧರ ಆರೋಗ್ಯ ಭದ್ರತೆ ಬಗ್ಗೆ ಸದನದಲ್ಲಿ ಧ್ವನಿ ಎತ್ತುವುದು ತಮ್ಮ ಕರ್ತವ್ಯ ಎಂದು ಹೇಳಿದ ಸಂಸದರು, ECHS ಯೋಜನೆಯಡಿ ನೋಂ ದಾಯಿತ ಆಸ್ಪತ್ರೆಗಳ ಮರು ಪಾವತಿ ಕ್ಲೈಮ್ ಗಳು ಸಕಾಲಕ್ಕೆ ವಿಲೇವಾರಿಯಾಗದೆ ಬಾಕಿ ಉಳಿಯುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದ್ದಾರೆ.

# ಸ್ವಂತ ಶಕ್ತಿಯಿಂದ ಉದ್ಯಮದಲ್ಲಿ ಯಶಸ್ಸು ಸಾಧಿಸಿ : ಪ್ರಸಾದ್ ಬಿ.ಎಸ್.



ಉಜಿರೆ : ಉಜಿರೆಯ ಸಿದ್ಧವನದಲ್ಲಿರುವ ರುಡ್‌ಸೆಟ್ ಸಂಸ್ಥೆಯಲ್ಲಿ ಆಯೋಜಿಸಲಾಗಿದ್ದ 'ಸಿ.ಸಿ. ಕ್ಯಾಮೆರಾ ಅಳವಡಿಸುವಿಕೆ ಮತ್ತು ಸರ್ವಿಸ್' ತರಬೇತಿಯ ಸಮಾರೋಪ ಸಮಾರಂಭದಲ್ಲಿ ಉಜಿರೆ ವರ್ತಕರ ಸಂಘದ ಅಧ್ಯಕ್ಷ ಹಾಗೂ 'ರಮ್ಯ ಫ್ಯಾನ್ಸ್' ಮಾಲಕ ಶ್ರೀ ಪ್ರಸಾದ್ ಬಿ.ಎಸ್. ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಉದ್ಯಮದಲ್ಲಿ ಯಶಸ್ಸು ಕಾಣಲು ಬೇರೆಯವರ ಬೆಂಬಲಕ್ಕಾಗಿ ಕಾಯದೆ, ಸ್ವಂತ ಪರಿಶ್ರಮ, ಆತ್ಮವಿಶ್ವಾಸ ಹಾಗೂ ದೃಢ ಸಂಕಲ್ಪದೊಂದಿಗೆ ಮುನ್ನಡೆಯಬೇಕು ಎಂದು ಅವರು ಶಿಬಿರಾರ್ಥಿಗಳಿಗೆ ಕರೆ ನೀಡಿದರು. ತರಬೇತಿ ಪೂರ್ಣಗೊಳಿಸಿದ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ತಮ್ಮ ಉದ್ಯಮ ಪಯಣದ ಅನುಭವಗಳು, ಉದ್ಯಮದ ಬೆಳವಣಿಗೆಯ ವಿವಿಧ ಹಂತಗಳು, ಎದುರಾಗುವ ಸವಾಲುಗಳು ಹಾಗೂ ಯಶಸ್ಸಿನ ಸೂತ್ರಗಳ ಕುರಿತು ಉಪಯುಕ್ತ ಮಾರ್ಗದರ್ಶನ ನೀಡಿದರು.

# ಸುದ್ದಿ ತುಣುಕು

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಚುನಾವಣೆಗೂ ಮುನ್ನ ಘೋಷಣೆ ಮಾಡಿದ್ದ 200 ಯುನಿಟ್ ಉಚಿತ ವಿದ್ಯುತ್ ಭರವಸೆ ಸಂಪೂರ್ಣ ಜಾರಿಗೊಳಿಸುವುದು ಮತ್ತು ಪ್ರತಿ ತಿಂಗಳು ವಿದ್ಯುತ್ ಬಿಲ್ ನೀಡುತ್ತಿರುವುದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ.

ಬಿಜೆಪಿ ಯುವ ಮುಖಂಡ ಪ್ರವೀಣ್ ನೆಟ್ಟಾರು ಕೊಲೆ ಪ್ರಕರಣದ ತನಿಖೆ ನಡೆಸುತ್ತಿರುವ ರಾಷ್ಟ್ರೀಯ ತನಿಖಾ ದಳ –NIA ಅಧಿಕಾರಿಗಳು ಕೇರಳದ ಕೊಚ್ಚಿಯಲ್ಲಿ ತಲೆಮರೆಸಿಕೊಂಡಿದ್ದ ಆರೋಪಿಯನ್ನ ಬಂಧಿಸಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಸಚಿವ ಸ್ಥಾನ ಕೈ ತಪ್ಪಿರುವ ಹಿನ್ನೆಲೆಯಲ್ಲಿ ಆಕ್ರೋಶ ಮತ್ತಷ್ಟು ಭುಗಿಲೆದ್ದಿದೆ. ಅವರ ಅಭಿಮಾನಿಗಳು ಪಂಜಿನ ಮೆರವಣಿಗೆ ನಡೆಸಿ, ತಮ್ಮ ನಾಯಕಿಗೆ ಮಂತ್ರಿಗಿರಿ ನೀಡುವಂತೆ ಒತ್ತಾಯಿಸಿದರು.

ಪರಿಶಿಷ್ಟ ಜಾತಿಗಳ ವರ್ಗೀಕರಣ ಹಾಗೂ ಒಳಮೀಸಲಾತಿ ಸಂಬಂಧ ರಾಜ್ಯ ಸಚಿವ ಸಂಪುಟ ಸಭೆ ಕೈಗೊಂಡಿರುವ ನಿರ್ಣಯಗಳನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ.

ಅಕ್ರಮ ಹಣ ವರ್ಗಾವಣೆ ಅಡಿ ಜಾರಿ ನಿರ್ದೇಶನಾಲಯ (ಇಡಿ) ನಡೆಸುವ ಶೋಧ, ಜಪ್ತಿ ಹಾಗೂ ಬ್ಯಾಂಕ್ ಖಾತೆಗಳ ಸ್ಥಗಿತ ಕ್ರಮಗಳನ್ನು ಪ್ರಶ್ನಿಸಿ ಗೇಮ್ಸ್‌ಕ್ರಾಫ್ಟ್ ಕಂಪನಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆಗೆ ಅರ್ಹವಾಗಿವೆ ಎಂದು ಹೈಕೋರ್ಟ್ ತಿಳಿಸಿದೆ.

ರ‍್ಯಾಗಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಗಳೂರು ನಗರ ಪೊಲೀಸರು ಕಾರ್ಯಾಚರಣೆ ನಡೆಸಿ ಐವರು ಆರೋಪಿಗಳನ್ನು ಬಂಧಿಸಿದ್ದಾರೆ ಎಂದು ಮಂಗಳೂರು ನಗರ ಪೊಲೀಸ್ ಕಮೀಷನರ್ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ.

ಇತ್ತೀಚಿಗೆ ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ತಾನು ರಾಜೀನಾಮೆ ನೀಡಿಲ್ಲ. ಅದೆಲ್ಲಾ ವದಂತಿ ಎಂದು ಹೊರಟ್ಟಿ ಹೇಳಿದ್ದರು. ಆದರೆ ಈಗ ರಾಜೀನಾಮೆ ಕೊಡುವಂತೆ ಹೊರಟ್ಟಿಗೆ ಕಾಂಗ್ರೆಸ್ ಸದಸ್ಯರು ಒತ್ತಾಯಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ಐವರು ಅಕ್ರಮ ಬಾಂಗ್ಲಾದೇಶಿ ಪ್ರಜೆಗಳು ಪತ್ತೆಯಾಗಿದ್ದು, ಪೊಲೀಸರು ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಶಬರಿಮಲೆ ಶ್ರೀ ಧರ್ಮ ಶಾಸ್ತಾ ದೇವಾಲಯದಲ್ಲಿನ ವಾಗ್ದೋಷವನ್ನು ನಿವಾರಿಸಲು ತಿರುವಾಂಕೂರು ದೇವಸ್ವಂ ಮಂಡಳಿಯು ವಿವಿಧ ದೇವಾಲಯಗಳಲ್ಲಿ ಪರಿಹಾರ ಧಾರ್ಮಿಕ ವಿಧಿವಿಧಾನಗಳನ್ನು ಕೈಗೊಂಡಿದೆ.

ರಾಜ್ಯಾದ್ಯಂತ ಏಳು ತಂಡಗಳಾಗಿ ಬಿಜೆಪಿ ಬರ ಅಧ್ಯಯನ ನಡೆಸುತ್ತಿದೆ. ಈ ವೇಳೆ ರೈತರ ಬಳಿ ತೆರಳಿ ಅವರ ಸಮಸ್ಯೆಗಳನ್ನು ಆಲಿಸುತ್ತಿದೆ. ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡುವಂತೆ ಸರ್ಕಾರಕ್ಕೆ ಒತ್ತಾಯಿಸಿದೆ.

ಜಮ್ಮು ಮತ್ತು ಕಾಶ್ಮೀರದಾದ್ಯಂತ ವ್ಯಾಪಕ ಮಳೆ ಹಾಗೂ ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆಯ ನಡುವೆಯೇ, ಈ ವರ್ಷದ ಅಮರನಾಥ ಯಾತ್ರೆಯ 28ನೇ ತಂಡವು ಯಾತ್ರೆ ಕೈಗೊಂಡಿದೆ.

ಕೆಪಿ ಮೈದಾನದಲ್ಲಿ ನಡೆಯಬೇಕಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ 'ಭರ್ತೋನ್ ಕಿ ಗೂಂಜ್' ಕಾರ್ಯಕ್ರಮಕ್ಕೆ ಕಾಯಸ್ಥ ಪಾಠಶಾಲಾ ಟ್ರಸ್ಟ್ ಈ ಮೊದಲು ನೀಡಿದ್ದ ಅನುಮತಿಯನ್ನು ರದ್ದುಗೊಳಿಸಿದೆ.

ಅಸ್ಸಾಂನಲ್ಲಿ ಪ್ರವಾಹ ಪರಿಸ್ಥಿತಿ ಇನ್ನೂ ಭೀಕರವಾಗಿದೆ. ಈ ವರ್ಷದ ಮಾನ್ಸೂನ್ ಋತುವಿನಲ್ಲಿ ಅಸ್ಸಾಂನಲ್ಲಿ ಮಳೆಗೆ ಬಲಿಯಾದವರ ಸಂಖ್ಯೆ 95ಕ್ಕೆ ಏರಿಕೆಯಾಗಿದೆ.

ಸಚಿವ ಸ್ಥಾನ ಸಿಗದೆ ಅಸಮಾಧಾನಗೊಂಡಿರುವ ಶಾಸಕರ ಮನವೊಲಿಸುವ ಯತ್ನ ಕಾಂಗ್ರೆಸ್ ನಡೆದಿದೆ. ಈ ನಡುವೆ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆಯನ್ನು ಹಿಂಪಡೆದಿದ್ದಾರೆ. ಬೇಳೂರು ಗೋಪಾಲಕೃಷ್ಣ ತಮ್ಮ ನಿರ್ಧಾರದಿಂದ ಹಿಂದೆ ಸರಿದಿದ್ದಾರೆ.

# ಜೀರಿಗೆ ರಸಂ



**ಬೇಕಾಗುವ ಪದಾರ್ಥಗಳು :**

ಜೀರಿಗೆ – 1/4 ಕಪ್
ಕಾಳು ಮೆಣಸು – 1/4 ಕಪ್
ಕೊತ್ತಂಬರಿ – 1 1/2ಕಪ್
ತೊಗರಿಬೇಳೆ – 2 ಚಮಚ
ಬ್ಯಾಡಗಿ ಮೆಣಸಿನಕಾಯಿ – 2
ಕರಿಬೇವು – 2–5 ಎಲೆ
ಇಂಗು – ಸ್ವಲ್ಪ
ಹುಣಸೆ ರಸ – 1/4 ಕಪ್
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :** ಮೊದಲಿಗೆ ಎಲ್ಲ ಸಾಮಗ್ರಿಗಳನ್ನೂ ಬೇರೆ ಬೇರೆಯಾಗಿ ಮಂದ ಉರಿಯಲ್ಲಿ ಘಮ್ ಎನ್ನುವವರೆಗೂ ಹುರಿದಿಟ್ಟುಕೊಳ್ಳಬೇಕು. ಅದು ಆರಿದ ಮೇಲೆ ನುಣ್ಣಗೆ ಪುಡಿ ಮಾಡಿ. ಒಂದು ಪಾತ್ರೆಯಲ್ಲಿ ಒಂದು ಲೋಟ ನೀರಿನ ಅಳತೆಗೆ ಒಂದು ಚಮಚದಷ್ಟು ಜೀರಿಗೆ ಮೆಣಸಿನ ರಸಂ ಪುಡಿ ಹಾಕಿ, ರುಚಿಗೆ ತಕ್ಕಷ್ಟು ಉಪ್ಪು ಹಾಕಿ, ಸ್ವಲ್ಪ ಹುಣಸೆ ರಸ ಸೇರಿಸಿ ಕುದಿಸಿದರೆ ರುಚಿ ಯಾದ ಮತ್ತು ಆರೋಗ್ಯಕರ ಜೀರಿಗೆ ರಸಂ ಸವಿಯಲು ಸಿದ್ಧ.

# ದುಬೈನಲ್ಲಿ ಭೀಕರ ಸರಣಿ ಸ್ಫೋಟ : ಉದ್ವಿಗ್ನತೆ ತೀವ್ರ



ದುಬೈ : ಅಮೆರಿಕ ಮತ್ತು ಇರಾನ್ ನಡುವೆ ಯುದ್ಧದ ಉದ್ವಿಗ್ನತೆ ತೀವ್ರಗೊಂಡಿರುವ ಬೆನ್ನಲ್ಲೇ, ಯುಎಇಯ ದುಬೈನಲ್ಲಿರುವ ಪ್ರಸಿದ್ಧ ಜೆಬೆಲ್ ಅಲಿ ಕೈಗಾರಿಕಾ ಪ್ರದೇಶದಲ್ಲಿ ಬುಧವಾರ ಭೀಕರ ಸರಣಿ ಸ್ಫೋಟಗಳು ಸಂಭವಿಸಿವೆ. ಕೇವಲ 20 ನಿಮಿಷಗಳ ಅಂತರದಲ್ಲಿ ಬರೋಬ್ಬರಿ ಏಳು ಸ್ಫೋಟಗಳು ಸಂಭವಿಸಿದ್ದು, ಆಕಾಶದ ತುಂಬಾ ದಟ್ಟವಾದ ಕಪ್ಪು ಹೊಗೆ ಆವರಿಸಿದೆ. ಈ ಘಟನೆಯ ದೃಶ್ಯಾವಳಿಗಳನ್ನು ಮೊಬೈಲ್‌ನಲ್ಲಿ ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡ ಆರೋಪದ ಮೇಲೆ ಇಬ್ಬರನ್ನು ಬಂಧಿಸಲಾಗಿದೆ.

# ಉಗ್ರರ ಸಾವು ಒಪ್ಪಿಕೊಂಡ ಲಷ್ಕರ್




ಪಾಕಿಸ್ತಾನ : ಪಾಕಿಸ್ತಾನ ಮೂಲದ ಕುಖ್ಯಾತ ಭಯೋತ್ಪಾದಕ ಸಂಘಟನೆ ಲಷ್ಕರ್–ಎ–ತೊಯ್ಬಾದ (LeT) ಪ್ರಮುಖ ಕಮಾಂಡರ್ ರಿಜ್ವಾನ್ ಹನೀಫ್, ಕಳೆದ ಮೂರ್ನಾಲ್ಕು ವರ್ಷಗಳಲ್ಲಿ ತಮ್ಮ ಸಂಘಟನೆಯ 30ಕ್ಕೂ ಹೆಚ್ಚು ಉಗ್ರರನ್ನು 'ಅಪರಿಚಿತ ಬಂದೂಕುಧಾರಿಗಳು' (Unknown Gunmen) ಹತ್ಯೆ ಮಾಡಿದ್ದಾರೆಂದು ಮುಕ್ತವಾಗಿ ಒಪ್ಪಿಕೊಂಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗುತ್ತಿದೆ. ನಿಷೇಧಿತ ಸಂಘಟನೆಯ ನಾಯಕನೊಬ್ಬ, ತಮ್ಮ ಪಡೆಗೆ ಉಂಟಾಗಿರುವ ಭಾರಿ ನಷ್ಟವನ್ನು ಈ ರೀತಿ ಬಹಿರಂಗವಾಗಿ ಒಪ್ಪಿಕೊಂಡಿರುವುದು ಅತ್ಯಂತ ಅಪರೂಪದ ವಿದ್ಯಮಾನವಾಗಿದೆ.

# ಇರಾನ್‌ಗೆ ಟ್ರಂಪ್ ಖಡಕ್ ಎಚ್ಚರಿಕೆ



ವಾಷಿಂಗ್ಟನ್: ಇರಾನ್ ದೇಶಕ್ಕೆ ಇನ್ನು ಮುಂದೆ ಹೆಚ್ಚಿನ ಕಾಲಾವಕಾಶ ಕೊಡುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗುಡುಗಿದ್ದು, ಮಧ್ಯಪ್ರಾಚ್ಯದಲ್ಲಿ ಮತ್ತೊಮ್ಮೆ ಭೀಕರ ಯುದ್ಧದ ಮುನ್ಸೂಚನೆ ಸಿಕ್ಕಿದೆ. ಇರಾನ್‌ನ ಪರಮಾಣು ಯೋಜನೆ ಮತ್ತು ಆಯಕಟ್ಟಿನ ಹೊರ್ಮುಜ್ ಜಲಸಂಧಿ ಸುತ್ತಲಿನ ಉದ್ವಿಗ್ನತೆಯ ನಡುವೆಯೇ ಟ್ರಂಪ್ ಇರಾನ್ ನಾಯಕತ್ವವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ತಮ್ಮ ಸಾಮಾಜಿಕ ಜಾಲತಾಣ 'ಟ್ರುತ್ ಸೋಷಿಯಲ್'ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಟ್ರಂಪ್, ಇರಾನ್‌ನ ದ್ವಂದ್ವ ನೀತಿಯನ್ನು ಬಹಿರಂಗಪಡಿಸಿದ್ದಾರೆ.

# ಇರಾನ್–ಒಮಾನ್ ಮಾತುಕತೆ ಅಂತಿಮ ಹಂತಕ್ಕೆ



ಒಮಾನ್ : ಜಾಗತಿಕ ತೈಲ ಹಾಗೂ ಅನಿಲ ವ್ಯಾಪಾರದಲ್ಲಿ ಸುಮಾರು ಶೇಕಡಾ 20ರಷ್ಟು ಪಾಲು ಹೊಂದಿರುವ ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಸುರಕ್ಷಿತ ಸಂಚಾರಕ್ಕೆ ಸಂಬಂಧಿಸಿದಂತೆ ಇರಾನ್ ಮತ್ತು ಒಮಾನ್ ನಡುವಿನ ರಾಜತಾಂತ್ರಿಕ ಮಾತುಕತೆಗಳು ಅಂತಿಮ ಹಂತಕ್ಕೆ ತಲುಪಿವೆ. ಈ ಕುರಿತು ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಘ್ಚಿ ಮಾಹಿತಿ ನೀಡಿದ್ದು, ಉಭಯ ದೇಶಗಳ ನಡುವಿನ ಚರ್ಚೆಯಲ್ಲಿ ಗಣನೀಯ ಪ್ರಗತಿಯಾಗಿದೆ ಎಂದು ತಿಳಿಸಿದ್ದಾರೆ. ಒಮಾನ್‌ನ ಹೊಸ ಪ್ರಸ್ತಾವನೆಯು ಸೇವಾ ಶುಲ್ಕವನ್ನು ಸಂಪೂರ್ಣವಾಗಿ ಸ್ವಯಂಪ್ರೇರಿತ ವ್ಯವಸ್ಥೆಯಾಗಿರಿಸುವ ಸುಳಿವು ನೀಡಿದೆ.

# ಪರ್ವತಾರೋಹಿ ನಿರ್ಮಲ್ ಪುರ್ಜಾ ಬಲಿ



ಪಾಕಿಸ್ತಾನ : ವಿಶ್ವಪ್ರಸಿದ್ಧ ಪರ್ವತಾರೋಹಿ ನಿರ್ಮಲ್ ಪುರ್ಜಾ ('ನಿಮ್ಸ್ ದಾಯ್') ಹಾಗೂ ಅವರ ತಂಡ ಪಾಕಿಸ್ತಾನ ಆಕ್ರಮಿತ ಕಾಶ್ಮೀರದ (PoK) ಗಿಲ್ಗಿಟ್–ಬಲ್ತಿಸ್ತಾನ್ ಪ್ರದೇಶದಲ್ಲಿರುವ ಬ್ರಾಡ್ ಪೀಕ್ ಪರ್ವತವೇರುವ ಸಂದರ್ಭದಲ್ಲಿ ಸಂಭವಿಸಿದ ಭೀಕರ ಹಿಮಪಾತಕ್ಕೆ ಸಿಲುಕಿ ಕೊನೆಯುಸಿರೆಳೆದಿದ್ದಾರೆ. ಮೂರು ದಿನಗಳ ಸುದೀರ್ಘ ಶೋಧನೆಯ ನಂತರ, ಅಲ್ಪೈನ್ ಕ್ಲಬ್ ಆಫ್ ಪಾಕಿಸ್ತಾನ್ ಹಾಗೂ ರಕ್ಷಣಾ ಪಡೆಗಳ ತಂಡವು ಸುಮಾರು 5,700 ಮೀಟರ್ ಎತ್ತರದ ಪ್ರದೇಶದಲ್ಲಿ ನಿರ್ಮಲ್ ಪುರ್ಜಾ ಸೇರಿದಂತೆ ತಂಡದ ಸದಸ್ಯರ ಮೃತದೇಹಗಳನ್ನು ಪತ್ತೆ ಹಚ್ಚಿ ಹೊರತೆಗೆದಿದೆ.

# ನೀರಜ್‌ಗೆ ಬೆಳ್ಳಿ, ಚಿನ್ನ ಗೆದ್ದ ಲಂಕಾದ ರುಮೇಶ್!



ಗ್ಲ್ಯಾಸ್ಗೋ : 2026ರ ಕಾಮನ್‌ವೆಲ್ತ್ ಗೇಮ್ಸ್‌ನ ಪುರುಷರ ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ಶ್ರೀಲಂಕಾದ 23 ವರ್ಷದ ಯುವ ಪಟು ರುಮೇಶ್ ತರಂಗಾ ಪಥಿರಾಗೆ ಬಂಗಾರದ ಪದಕ ಗೆದ್ದು ಇತಿಹಾಸ ಬರೆದಿದ್ದಾರೆ. ಫೈನಲ್ ಪಂದ್ಯದಲ್ಲಿ ಬರೋಬ್ಬರಿ 89.75 ಮೀಟರ್ ದೂರ ಜಾವೆಲಿನ್ ಎಸೆಯುವ ಮೂಲಕ ಅವರು ಭಾರತದ ಮಾಜಿ ವಿಶ್ವ ಚಾಂಪಿಯನ್ ನೀರಜ್ ಚೋಪ್ರಾ ಸೇರಿದಂತೆ ದಿಗ್ಗಜ ಅಥ್ಲೀಟ್‌ಗಳನ್ನು ಹಿಂದಿಕ್ಕಿದ್ದಾರೆ.

# ಹೊಸ ಇತಿಹಾಸ ಬರೆದ ತೇಜಸ್ವಿನ್ ಶಂಕರ್!





ಗ್ಲ್ಯಾಸ್ಗೋ : ತೀವ್ರ ಗಾಯದ ಸಮಸ್ಯೆಯನ್ನು ಮೆಟ್ಟಿ ನಿಂತು ಹೊಸ ಇತಿಹಾಸ ಬರೆದಿರುವ ರಾಷ್ಟ್ರೀಯ ದಾಖಲೆ ವೀರ ತೇಜಸ್ವಿನ್ ಶಂಕರ್, ಕಾಮನ್‌ವೆಲ್ತ್ ಕ್ರೀಡಾಕೂಟದ ಡೆಕಥ್ಲಾನ್ ಸ್ಪರ್ಧೆಯಲ್ಲಿ ಪದಕ ಗೆದ್ದ ಮೊದಲ ಭಾರತೀಯ ಎಂಬ ಐತಿಹಾಸಿಕ ಸಾಧನೆ ಮಾಡಿದ್ದಾರೆ. ಎರಡು ದಿನಗಳ ಕಾಲ ನಡೆದ 10 ಕಠಿಣ ಸ್ಪರ್ಧೆಗಳ ಡೆಕಥ್ಲಾನ್ ವಿಭಾಗದಲ್ಲಿ ಒಟ್ಟು 7,976 ಅಂಕಗಳನ್ನು ಕಲೆಹಾಕಿದ 27 ವರ್ಷದ ತೇಜಸ್ವಿನ್, ಅದ್ಭುತ ಪ್ರದರ್ಶನ ನೀಡಿ ಕಂಚಿನ ಪದಕಕ್ಕೆ ಕೊರಳೊಡ್ಡಿದ್ದಾರೆ.

# 39ಪದಕಗಳೊಂದಿಗೆ 4ನೇ ಸ್ಥಾನ ಪಡೆದ ಭಾರತ




ಗಾಸ್ಗೋ : 2026ರ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾರತದ ಅಭಿಯಾನಕ್ಕೆ ಅದ್ದೂರಿ ತೆರೆಬಿದ್ದಿದೆ. ಕ್ರೀಡಾಕೂಟದ 11ನೇ ಹಾಗೂ ಅಂತಿಮ ದಿನದಂದು ಭಾರತಕ್ಕೆ ಯಾವುದೇ ಪದಕ ಬರಲಿಲ್ಲ. ಒಟ್ಟಾರೆ ಈ ಕ್ರೀಡಾಕೂಟದಲ್ಲಿ ಭಾರತ 13 ಚಿನ್ನ, 17 ಬೆಳ್ಳಿ ಹಾಗೂ 9 ಕಂಚು ಸೇರಿದಂತೆ ಒಟ್ಟು 39 ಪದಕಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಗಿ, ಪದಕಗಳ ಪಟ್ಟಿಯಲ್ಲಿ 4ನೇ ಸ್ಥಾನವನ್ನು ಪಡೆದುಕೊಂಡಿತು.

# ಉದ್ಯೋಗ ಆಕಾಂಕ್ಷಿಗಳಿಗೆ 'ಜಾತಿ–ಆದಾಯ ಪ್ರಮಾಣಪತ್ರ'ದ ಕಿರಿಕಿರಿ!





ಬೆಂಗಳೂರು : ಕೆಇಎ ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ 'ಉದ್ಯೋಗಕ್ಕಾಗಿಯೇ ಪಡೆದ ಜಾತಿ ಮತ್ತು ಆದಾಯ ಪ್ರಮಾಣಪತ್ರ'ವನ್ನು ಕಡ್ಡಾಯಗೊಳಿಸಿರುವುದು ರಾಜ್ಯದ ಲಕ್ಷಾಂತರ ಉದ್ಯೋಗಾಕಾಂಕ್ಷಿಗಳನ್ನು ತೀವ್ರ ಆತಂಕಕ್ಕೆ ತಳ್ಳಿದೆ. ಶೈಕ್ಷಣಿಕ ಅಥವಾ ಇತರೆ ಉದ್ದೇಶಕ್ಕೆ ಪಡೆದ ಪ್ರಮಾಣಪತ್ರಗಳನ್ನು ನೇಮಕಾತಿ ಪ್ರಕ್ರಿಯೆಗೆ ಪರಿಗಣಿಸುವುದಿಲ್ಲ ಎಂದು ಕೆಇಎ ಸ್ಪಷ್ಟಪಡಿಸಿರುವುದೇ ಈ ಗೊಂದಲಕ್ಕೆ ಪ್ರಮುಖ ಕಾರಣವಾಗಿದೆ. ವಿಎ, ಭೂಮಾಪಕರು, ವಸತಿ ಶಾಲೆಗಳ ಶಿಕ್ಷಕರು ಹಾಗೂ ಪೊಲೀಸ್ ಕಾನ್‌ಸ್ಟೇಬಲ್ ಸೇರಿದಂತೆ ವಿವಿಧ ಗ್ರೂಪ್–ಸಿ ಹುದ್ದೆಗಳ ನೇಮಕಾತಿಗೆ ಈ ಹೊಸ ನಿಯಮವನ್ನು ಕಡ್ಡಾಯಗೊಳಿಸಲಾಗಿದೆ.

# ರಾಜ್ಯದಲ್ಲಿ 'ಋತುತಾರೆ' ಯೋಜನೆ ಘೋಷಣೆ



ಬೆಂಗಳೂರು: ಮಹಿಳೆಯರ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಳಜಿಗೆ ಉತ್ತೇಜನ ನೀಡುವ ಉದ್ದೇಶದಿಂದ ರಾಜ್ಯ ಸರ್ಕಾರ 'ಋತುತಾರೆ' ಎಂಬ ವಿನೂತನ ಯೋಜನೆ ಯನ್ನು ಜಾರಿಗೆ ತಂದಿದೆ. ದೇಶದಲ್ಲೇ ಪ್ರಥಮ ಬಾರಿಗೆ ಋತುಬಂಧ ಹಾಗೂ ಮಹಿಳಾ ಆರೋಗ್ಯ ಸಮಸ್ಯೆಗಳ ಕುರಿತು ವಿಶೇಷ ಅರಿವು ಮೂಡಿಸಲು ರೂಪಿಸಲಾದ ಈ ಯೋಜನೆಗೆ ನಟಿ ರಮ್ಯಾ ಅವರನ್ನು ರಾಯಭಾರಿಯನ್ನಾಗಿ ನೇಮಿಸಲಾಗಿದೆ. ಯೋಜನೆಯ ಭಾಗವಾಗಿ ಮಹಿಳೆಯರ ಆರೋಗ್ಯ ಸಮಸ್ಯೆಗಳ ಸಮಗ್ರ ಅಧ್ಯಯನ ಹಾಗೂ ಸೂಕ್ತ ಪರಿಹಾರ ಮಾರ್ಗಗಳನ್ನು ಸೂಚಿಸಲು ತಜ್ಞ ವೈದ್ಯೆ ಡಾ. ಜೋಸ್ನಾ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ನೇಮಿಸಲಾಗಿದೆ.

# ಮತದಾರರ ಪಟ್ಟಿಯಲ್ಲಿ ಕೋಟಿ ಹೆಸರುಗಳು 'ಎಎಸ್‌ಡಿಡಿಒ' ವರ್ಗಕ್ಕೆ



ಬೆಂಗಳೂರು : ಮತದಾರರ ಪಟ್ಟಿಯ ವಿಶೇಷ ಸಾಂದ್ರ ಪರಿಷ್ಕರಣೆ (SIR) ಪ್ರಕ್ರಿಯೆಯಲ್ಲಿ ರಾಜ್ಯದ ಒಟ್ಟು 5.54 ಕೋಟಿ ನೋಂದಾಯಿತ ಮತದಾರರ ಪೈಕಿ 1.11 ಕೋಟಿಗೂ ಹೆಚ್ಚು ಮತದಾರರ ಹೆಸರುಗಳನ್ನು 'ಎಎಸ್‌ಡಿಡಿಒ' (ಗೈರುಹಾಜರಿ, ಸ್ಥಳಾಂತರ, ನಕಲಿ, ಮೃತ ಮತ್ತು ಇತರೆ) ವರ್ಗದಡಿ ಗುರುತಿಸಲಾಗಿದೆ. ಸಾರ್ವಜನಿಕರು ಆನ್‌ಲೈನ್ ಮೂಲಕವೇ ತಮ್ಮ ಹೆಸರು ಹಾಗೂ ಸ್ಥಿತಿಗತಿಯನ್ನು ಪರಿಶೀಲಿಸಿಕೊಳ್ಳಲು ಮುಖ್ಯ ಚುನಾವಣಾಧಿಕಾರಿಗಳು (CEO) ಅವಕಾಶ ಕಲ್ಪಿಸಿದ್ದಾರೆ. ಅಧಿಕೃತ ವೆಬ್‌ಸೈಟ್ ceo.karnataka.gov.in/asddo.html ಭೇಟಿ ನೀಡಿ ತಮ್ಮ ಹೆಸರು ಇದೆಯೇ ಎಂಬುದನ್ನು ತಿಳಿದುಕೊಳ್ಳಬಹುದು.

# ಕೃಷಿ ಅಧಿಕಾರಿ ನೇಮಕಾತಿ ಗೊಂದಲ ಪರಿಹಾರಕ್ಕೆ ಸಿಎಂ ಭರವಸೆ



ಬೆಂಗಳೂರು : ಕೃಷಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ಉಂಟಾಗಿರುವ ಗೊಂದಲವನ್ನು ಕಾನೂನಾತ್ಮಕವಾಗಿ ಬಗೆಹರಿಸಲು ಸಂಬಂಧಪಟ್ಟ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರತಿಭಟನಾನಿರತ ವಿದ್ಯಾರ್ಥಿಗಳಿಗೆ ಭರವಸೆ ನೀಡಿದ್ದಾರೆ. 14ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನ ಕಾರ್ಯಕ್ರಮದ ಸ್ಥಳದ ಬಳಿ ತಮಗೆ ಮನವಿ ಸಲ್ಲಿಸಲು ಆಗಮಿಸಿದ್ದ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳನ್ನು ಗಮನಿಸಿ, ಖುದ್ದಾಗಿ ಹತ್ತಿರ ಕರೆದು, ಮರದ ನೆರಳಿಗೆ ಕರೆದೊಯ್ದು ಸಮಸ್ಯೆಯ ವಸ್ತುಸ್ಥಿತಿಯನ್ನು ಆಲಿಸಿದರು.

# ಪೋಲಿಸ್ ಕಾನ್‌ಸ್ಟೇಬಲ್ ಪರೀಕ್ಷೆ ಗೊಂದಲ:ಆರ್. ಅಶೋಕ್ ಆಕ್ರೋಶ



ಬೆಂಗಳೂರು : ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಭಾನುವಾರ ನಡೆಸಿದ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆಯಲ್ಲಿ ಉಂಟಾದ ಗೊಂದಲ ಹಾಗೂ ಎಡವಟ್ಟುಗಳ ವಿರುದ್ಧ ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ಅವರು, ವಿಜಯಪುರ ಪರೀಕ್ಷಾ ಕೇಂದ್ರದಲ್ಲಿ ಪ್ರಶ್ನೆಪತ್ರಿಕೆ ವಿತರಣೆಯಲ್ಲಿ ವಿಳಂಬ, OMR ಶೀಟ್‌ಗಳ ಗೊಂದಲ ಹಾಗೂ ಅಭ್ಯರ್ಥಿಗಳು ಪರೀಕ್ಷೆಯಿಂದ ಹೊರನಡೆಯುವಂತಾದ ಘಟನೆಗಳು ಕ್ಷಮಿಸಲಾಗದ ನಿರ್ಲಕ್ಷ್ಯ ಮತ್ತು ಸಂಪೂರ್ಣ ಆಡಳಿತ ವೈಫಲ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದಿದ್ದಾರೆ.

# ಉಚಿತ ಬಸ್ ಪ್ರಯಾಣ ಹೇಳಿಕೆಗೆ ಭಾರಿ ಆಕ್ರೋಶ



ಕೇರಳಮ್ : ಕೇರಳದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ 'ಪ್ರಿಯದರ್ಶಿನಿ' ಯೋಜನೆಯಡಿ ಉಚಿತ ಪ್ರಯಾಣ ಬೆಳೆಸುವ ಮಹಿಳೆಯರ ಕುರಿತು ರಾಜ್ಯ ಸಾರಿಗೆ ಸಚಿವ ಸಿ.ಪಿ. ಜಾನ್ ನೀಡಿರುವ ಹೇಳಿಕೆ ತೀವ್ರ ವಿವಾದ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ. ಖಾಸಗಿ ಬಸ್ ಕಾರ್ಮಿಕರ ಸಂಘದ ರಾಜ್ಯ ಸಮ್ಮೇಳನದಲ್ಲಿ ಮಾತನಾಡಿದ ಸಚಿವರು, ಮಹಿಳೆಯರು ಉಚಿತ ಪ್ರಯಾಣಕ್ಕಾಗಿ ಬಸ್‌ಗಳಲ್ಲಿ ಓಡಾಡುತ್ತಾರೆ ಆದರೆ ಮಕ್ಕಳನ್ನು ಹೆಚ್ಚಿನ ಶುಲ್ಕ ತೆತ್ತು ಖಾಸಗಿ ಶಾಲೆಗಳಿಗೆ ಕಳುಹಿಸುತ್ತಾರೆ ಎಂದು ಹೇಳಿದ್ದರು. ಅನಾರೋಗ್ಯದ ಸಮಯದಲ್ಲಿ ಖಾಸಗಿ ಆಸ್ಪತ್ರೆಗಳ ವೆಚ್ಚ ಭರಿಸಲಾಗದೆ ಸರ್ಕಾರಿ ಆಸ್ಪತ್ರೆಯ ವರಾಂಡಾದಲ್ಲಿ ಮಲಗುತ್ತಾರೆ ಎಂದೂ ವ್ಯಾಖ್ಯಾನಿಸಿದ್ದರು.

# ಆಪ್ ಪ್ರಧಾನಿ ನಿವಾಸ ಚಲೋ : ಕೇಜ್ರಿವಾಲ್ ತಡೆದ ದೆಹಲಿ ಪೊಲೀಸ್



ನವದೆಹಲಿ : ಕೇಂದ್ರ ಸರ್ಕಾರದ ಇ20 ಪೆಟ್ರೋಲ್ ನೀತಿಯನ್ನು ವಿರೋಧಿಸಿ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸದತ್ತ ಮೆರವಣಿಗೆ ಹೊರಟಿದ್ದ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಹಾಗೂ ಪಕ್ಷದ ನಾಯಕರನ್ನು ದೆಹಲಿ ಪೊಲೀಸರು ಮಾರ್ಗಮಧ್ಯದಲ್ಲೇ ತಡೆದು ನಿಲ್ಲಿಸಿದ್ದಾರೆ. ಪೊಲೀಸರ ಈ ಕ್ರಮವನ್ನು ಖಂಡಿಸಿ ಕೇಜ್ರಿವಾಲ್, ಮನೀಶ್ ಸಿಸೋಡಿಯಾ ಸೇರಿದಂತೆ ನೂರಾರು ಬೆಂಬಲಿಗರು ಫಿರೋಜ್ ಶಹಾ ರಸ್ತೆಯಲ್ಲೇ ಕುಳಿತು ಧರಣಿ ನಡೆಸಿದರು. ಪೆಟ್ರೋಲ್‌ನಲ್ಲಿ ಎಥೆನಾಲ್ ಮಿಶ್ರಣ ಮಾಡುವುದರಿಂದ ವಾಹನಗಳ ಇಂಧನ ದಕ್ಷತೆ ಕುಸಿಯುತ್ತಿದೆ ಮತ್ತು ಎಂಜಿನ್‌ಗಳು ಹಾಳಾಗುತ್ತಿವೆ ಎಂದು ಆಪ್ ಆರೋಪಿಸಿದೆ.

# ಬಂಕಿಪುರ ಉಪಚುನಾವಣೆ : ಬಿಜೆಪಿ ಭದ್ರಕೋಟೆ ಧೂಳಿಪಟ



ಪಾಟ್ನಾ : ಬಿಹಾರದ ಬಂಕಿಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಜನ್ ಸುರಾಜ್ ಪಕ್ಷದ ಮುಖ್ಯಸ್ಥ ಪ್ರಶಾಂತ್ ಕಿಶೋರ್ ಐತಿಹಾಸಿಕ ಗೆಲುವು ಸಾಧಿಸಿದ್ದು. ತಮ್ಮ ಮೊದಲ ನೇರ ಚುನಾವಣಾ ಸ್ಪರ್ಧೆಯಲ್ಲೇ ಬಿಜೆಪಿಯ ನೀರಜ್ ಕುಮಾರ್ ಅವರನ್ನು 18,953 ಮತಗಳ ಅಂತರದಿಂದ ಪರಾಭವಗೊಳಿಸುವ ಮೂಲಕ, ಪ್ರಶಾಂತ್ ಕಿಶೋರ್ ತಮ್ಮ ಪಕ್ಷಕ್ಕೆ ಚೊಚ್ಚಲ ಚುನಾವಣಾ ಗೆಲುವಿನ ಸಿಹಿ ನೀಡಿದ್ದಾರೆ. 1995ರಿಂದ ಬಿಜೆಪಿಯ ಪ್ರಬಲ ಭದ್ರಕೋಟೆಯಾಗಿದ್ದ ಬಂಕಿಪುರ ಕ್ಷೇತ್ರದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರು ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ಈ ಉಪಚುನಾವಣೆ ಎದುರಾಗಿತ್ತು.

# ಎಲ್‌ಐಸಿ ಶೇರು ಮೌಲ್ಯ ತೀವ್ರ ಕುಸಿತ: ಕೇಂದ್ರದಿಂದ ಶೇ. 6.5 ಪಾಲು ಮಾರಾಟ





ನವದೆಹಲಿ : ಕೇಂದ್ರ ಸರ್ಕಾರವು ದೇಶದ ಅತಿದೊಡ್ಡ ವಿಮಾ ಸಂಸ್ಥೆಯಾದ ಭಾರತೀಯ ಜೀವ ವಿಮಾ ನಿಗಮದ ಶೇ. 6.5ರಷ್ಟು ಪಾಲನ್ನು ಆಫರ್ ಫಾರ್ ಸೇಲ್ ಮೂಲಕ ಮಾರಾಟ ಮಾಡಲು ನಿರ್ಧರಿಸಿದೆ. ಪ್ರತಿ ಶೇರಿಗೆ ಬಂಪರ್ ರಿಯಾಯಿತಿ ದರ ನಿಗದಿಪಡಿಸಿದ ಬೆನ್ನಲ್ಲೇ ಎಲ್‌ಐಸಿ ಶೇರು ಮೌಲ್ಯ ಶೇ.7ರಷ್ಟು ತೀವ್ರ ಕುಸಿತ ಕಂಡಿದೆ. ಶೇರು ದರ ಪ್ರತಿ ಶೇರಿಗೆ 398.50ರೂ. ತಲುಪಿದ್ದ ರಿಂದ ಕಂಪನಿಯ ಪ್ರಸ್ತುತ ಮಾರುಕಟ್ಟೆ ಬಂಡವಾಳ ಮೌಲ್ಯ ಸುಮಾರು 5.05ಲಕ್ಷ ಕೋಟಿ ರೂ.ಗೆ ಇಳಿಕೆಯಾಗಿದೆ. 2026ರ ವರ್ಷದಲ್ಲಿ ನಿಫ್ಟಿ–50 ಶೇ. 6ರಷ್ಟು ಕುಸಿತ ಕಂಡಿದ್ದರೆ, ಎಲ್‌ಐಸಿ ಶೇರುಗಳು ಶೇ. 6.5ರಷ್ಟು ಮೌಲ್ಯ ಕಳೆದುಕೊಂಡಿವೆ.

# ದೆಹಲಿಯ ಜಂತರ್ ಮಂತರ್‌ನಲ್ಲಿ ದಾಳಿಗೆ ಸಂಚು: ಶಂಕಿತ ಉಗ್ರರ ಬಂಧನ



ಪಂಜಾಬ್ : ಪಂಜಾಬ್‌ನಲ್ಲಿ ಪಾಕಿಸ್ತಾನದ ಐಎಸ್‌ಐ ಬೆಂಬಲಿತ ಎರಡು ಗಡಿಯಾಚೆಗಿನ ಭಯೋತ್ಪಾದನಾ ಮಾಡ್ಯೂಲ್‌ಗಳನ್ನು ಅಮೃತಸರ ಕಮಿಷನರೇಟ್ ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದಾರೆ. ಕಾರ್ಯಾ ಚರಣೆಯಲ್ಲಿ ನಾಲ್ವರು ಬಾಲಾಪರಾಧಿಗಳು ಸೇರಿದಂತೆ ಒಟ್ಟು ಒಂಬತ್ತು ಜನ ಆರೋಪಿಗಳನ್ನು ಬಂಧಿಸಲಾಗಿದ್ದು, ಅವರಿಂದ ಮಾರ ಕಾಸ್ತ್ರಗಳು ಹಾಗೂ ಸ್ಫೋಟಕಗಳನ್ನು ವಶಪಡಿ ಸಿಕೊಳ್ಳಲಾಗಿದೆ. ದೆಹಲಿಯ ಜಂತರ್ ಮಂತರ್‌ನಲ್ಲಿ ಇತ್ತೀಚೆಗೆ ನಡೆದ ಸಿಜೆಪಿ ಪ್ರತಿಭಟನೆಯ ವೇಳೆ ದಾಳಿ ನಡೆಸಲು ಪಾಕಿಸ್ತಾನಿ ಐಎಸ್‌ಐ ನಿರ್ವಾಹಕರು ಸಂಚು ರೂಪಿಸಿದ್ದರು ಎಂಬ ಆಘಾತಕಾರಿ ಮಾಹಿತಿ ತನಿಖೆಯಿಂದ ಹೊರಬಿದ್ದಿದೆ.

# ಜಮ್ಮು–ಕಾಶ್ಮೀರದಲ್ಲಿ ಹೊಸ ಅಧ್ಯಾಯಕ್ಕೆ 7 ವರ್ಷ – ಪ್ರಧಾನಿ ಮೋದಿ




ನವದೆಹಲಿ : 2019ರ ಆಗಸ್ಟ್ 5ರಂದು ಕೇಂದ್ರ ಸರ್ಕಾರವು ಆರ್ಟಿಕಲ್ 370 ಮತ್ತು 35(ಎ) ಅನ್ನು ರದ್ದುಗೊಳಿಸಿ, ಜಮ್ಮು–ಕಾಶ್ಮೀರಕ್ಕೆ ಇದ್ದ ವಿಶೇಷ ಸ್ಥಾನಮಾನವನ್ನು ಅಂತ್ಯಗೊಳಿಸುವ ಮೂಲಕ ಅದನ್ನು ಸಂಪೂರ್ಣವಾಗಿ ಭಾರತದ ಸಾಂವಿಧಾನಿಕ ಚೌಕಟ್ಟಿನೊಳಗೆ ತಂದಿತ್ತು. ಸಂದೇಶ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಈ ಕ್ರಮವನ್ನು ಜಮ್ಮು–ಕಾಶ್ಮೀರ ಹಾಗೂ ಲಡಾಖ್‌ನ ಪಯಣದಲ್ಲಿ ನಿರ್ಣಾಯಕ ಹೊಸ ಅಧ್ಯಾಯ ಎಂದು ಬಣ್ಣಿಸಿದ್ದಾರೆ. ಏಳು ವರ್ಷಗಳ ಹಿಂದೆ ಆರ್ಟಿಕಲ್ 370 ಇತಿಹಾಸದ ಪುಟ ಸೇರಿದ ನಂತರ ಅಲ್ಲಿನ ಜನರ ಬದುಕಿನಲ್ಲಿ ವ್ಯಾಪಕ ಬದಲಾವಣೆಗಳಾಗಿವೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಕರಾವಳಿ ತರಂಗಿಣಿ
ಕಲಾ ತರಂಗಿಣಿ

# ಆ. 22, 23ರಂದು ಧಾರವಾಡದಲ್ಲಿ 'ಅಂತರಾಷ್ಟ್ರೀಯ ಚಲನಚಿತ್ರೋತ್ಸವ'

ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ವತಿಯಿಂದ ಇದೇ ಆಗಸ್ಟ್ 22, 23ರಂದು ಧಾರವಾಡದ ಆಲೂರು ವೆಂಕಟರಾಯ ಸಭಾ ಭವನದಲ್ಲಿ'ಅಂತರಾಷ್ಟ್ರೀಯ ಚಲನಚಿತ್ರೋತ್ಸವ' ನಡೆಯಲಿದೆ. ಈ ಚಲನಚಿತ್ರೋತ್ಸವದ ಕುರಿತು ಹೆಚ್ಚಿನ ಮಾಹಿತಿ ನೀಡಲು ಇತ್ತೀಚೆಗೆ ಉತ್ತರ ಕರ್ನಾಟಕ ಚಲನಚಿತ್ರ ಮಂಡಳಿ ಪದಾಧಿಕಾರಿಗಳು ಪತ್ರಿಕಾಗೋಷ್ಠಿ ಆಯೋಜಿಸಿದ್ದರು. 2014ರಲ್ಲಿ ನಮ್ಮ ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಪ್ರಾರಂಭವಾಯಿತು. ನಮ್ಮ ಮಂಡಳಿ ವತಿಯಿಂದ 2022ರಲ್ಲಿ 'ಅಂತಾರಾಷ್ಟ್ರೀಯ ಕಿರುಚಿತ್ರೋತ್ಸವ' ಆಯೋಜಿಸಲಾಗಿತ್ತು, ಈಗ 2026ರಲ್ಲಿ 'ಅಂತರಾಷ್ಟ್ರೀಯ ಚಲನಚಿತ್ರೋತ್ಸವ' ಆಯೋಜಿಸಲಾಗಿದೆ. ಈ ಚಿತ್ರೋತ್ಸವದಲ್ಲಿ ಚಲನಚಿತ್ರ, ಕಿರುಚಿತ್ರ, ಸಾಕ್ಷ್ಯಚಿತ್ರ, ಟೆಲಿಫಿಲಂ ಹಾಗೂ ಆಲ್ಬಂ ಸಾಂಗ್‌ಗಳನ್ನು ಆಹ್ವಾನಿಸಲಾಗಿದೆ. ಒಂದೊಂದು ವಿಭಾಗಕ್ಕೆ ಒಂದೊಂದ ರೀತಿಯ ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ. ಆಸಕ್ತರು ಆಗಸ್ಟ್ 5ರ ಒಳಗೆ ತಮ್ಮ ಚಿತ್ರ, ಕಿರುಚಿತ್ರ ಹಾಗೂ ಆಲ್ಬಂಗಳನ್ನು ಕಳುಹಿಸಬಹುದು. ತೀರ್ಪುಗಾರರು ಆ ಚಿತ್ರಗಳನ್ನು ವೀಕ್ಷಿಸಿ ಕೆಲವನ್ನು ಆಯ್ಕೆ ಮಾಡುತ್ತಾರೆ. ಆಯ್ಕೆಯಾದ ಚಲನಚಿತ್ರ, ಕಿರುಚಿತ್ರ, ಟೆಲಿಚಿತ್ರ ಹಾಗೂ ಆಲ್ಬಂ ಸಾಂಗ್ ಗಳನ್ನು 'ಅಂತರಾಷ್ಟ್ರೀಯ ಚಲನಚಿತ್ರೋತ್ಸವ'ದಲ್ಲಿ ಪ್ರದರ್ಶಿಸಲಾಗುವುದು. ಮೊದಲ ಉತ್ತಮ ಚಲನಚಿತ್ರಕ್ಕೆ (ಫ್ಯೂಚರ್) ಇಪ್ಪತ್ತೈದು ಸಾವಿರ ನಗದು ಬಹುಮಾನ ಹಾಗೂ ಪಾರಿತೋಷಕ, ಉತ್ತಮ ಟೆಲಿಫಿಲಂಗೆ ಇಪ್ಪತ್ತು ಸಾವಿರ ನಗದು ಹಾಗೂ ಪಾರಿತೋಷಕ, ಉತ್ತಮ ಕಿರುಚಿತ್ರಕ್ಕೆ ಹದಿನೈದು ಸಾವಿರ ನಗದು ಹಾಗೂ ಪಾರಿತೋಷಕ, ಉತ್ತಮ ವಿಡಿಯೋ ಸಾಂಗ್‌ಗೆ ಹತ್ತು ಸಾವಿರ ನಗದು ಹಾಗೂ ಪಾರಿತೋಷಕ ನೀಡಿ ಗೌರವಿಸಲಾಗುವುದು. ಭಾಗವಹಿಸಿದ ಪ್ರತಿಯೊಂದು ಚಿತ್ರಗಳಿಗೂ(ಎಲ್ಲಾ ವಿಭಾಗ) ಪಾರಿತೋಷಕ ಹಾಗೂ ಪ್ರಮಾಣಪತ್ರ ನೀಡಿ ಗೌರವಿಸಲಾಗುವುದು. 2020ರಿಂದ 2026 ಜೂನ್‌ವರೆಗೂ ತೆರೆಕಂಡಿರುವ ಚಲನಚಿತ್ರಗಳು ಈ ಚಲನಚಿತ್ರೋತ್ಸವಕ್ಕೆ ಅರ್ಜಿ ಹಾಕಬಹುದು ಎಂದು ತಿಳಿಸಲಾಗಿದೆ..



# ಹೆಂಡತಿಯ ಪ್ರೀತಿಗೋಸ್ಕರ ತುಳು ಚಿತ್ರ ಮಾಡಿದ ಗೋಲ್ಡನ್ ಸ್ಟಾರ್

ನಾನು ದುಡ್ಡು ಮಾಡುವ ಸಲುವಾಗಿ ತುಳು ಚಿತ್ರ ಮಾಡಿದ್ದಲ್ಲ, ನನ್ನ ಹೆಂಡತಿಯ ಪ್ರೀತಿಗೋಸ್ಕರ ಮಾತ್ರ. ಈ ಚಿತ್ರದಿಂದ ಅವಳು ಖುಷಿಯಾಗಿದ್ದಾಳೆ. ಈ ಚಿತ್ರದಿಂದ ಲಾಭದ ನಿರೀಕ್ಷೆಯೂ ಇಲ್ಲ ಎಂದು ಗೋಲ್ಡನ್ ಸ್ಟಾರ್ ಗಣೇಶ್ ಹೇಳಿದರು. ಸಂದೀಪ್ ಬೆದ್ರ ನಿರ್ದೇಶನದ ಗೋಲ್ಡನ್ ಮೂವೀಸ್ ಬ್ಯಾನರ್‌ನಲ್ಲಿ ತಯಾರಾದ ದ್ವಿಭಾಷಾ ಚಲನಚಿತ್ರ 'ಪಿಕ್ಚರ್' ಆಗಸ್ಟ್ 7ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು, ಸಿನಿಮಾದ ಪ್ರಚಾರಕ್ಕೆ ಮಂಗಳೂರಿಗೆ ಆಗಮಿಸಿದ್ದ ಅವರು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ, ನನಗೂ ಮಂಗಳೂರಿಗೂ ಉತ್ತಮ ಸಂಬಂಧವಿದೆ. ಹೊಸ ಪ್ರತಿಭೆಗಳ ಜೊತೆಗೆ ತುಳು ನಾಡಿನ ಹಿರಿಯ, ಕಿರಿಯ ಕಲಾವಿದರನ್ನು ಈ ಚಿತ್ರದಲ್ಲಿ ಒಗ್ಗೂಡಿಸಿರುವುದು ವಿಶೇಷ. ಕುಟುಂಬದ ಎಲ್ಲಾ ವರ್ಗದ ಜನರಿಗೆ ಈ ಚಿತ್ರವು ಇಷ್ಟವಾಗಲಿದ್ದು ಎಲ್ಲರೂ ಬಂದು ಚಿತ್ರವನ್ನು ನೋಡಿ ಪ್ರೋತ್ಸಾಹಿಸಬೇಕೆಂದು ವಿನಂತಿಸಿದರು. ಚಿತ್ರದ ನಿರ್ಮಾಪಕಿ ಶಿಲ್ಪಾ ಗಣೇಶ್ ಮಾತನಾಡಿ, ಕಾಮಿಡಿ ಹಾಗೂ ಕೌಟುಂಬಿಕ ಕಥಾಹಂದರ ಹೊಂದಿರುವ ಚಿತ್ರಕ್ಕೆ ಮಂಗಳೂರು, ಪುತ್ತೂರು ಮತ್ತು ಉಡುಪಿಯ ಪ್ರೀಮಿಯರ್ ಪ್ರದರ್ಶನಗಳಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ತುಳು ಚಿತ್ರರಂಗದ ಹಿರಿಯ ಕಲಾವಿದರು ಹಾಗೂ ತಾಂತ್ರಿಕ ತಂಡದ ಸಹಕಾರ ದಿಂದ ಚಿತ್ರ ಬಹಳ ಸುಂದರವಾಗಿ ಮೂಡಿಬಂದಿದೆ ಎಂದು ಹೇಳಿದರು. ಚಿತ್ರದಲ್ಲಿ ನಿತ್ಯ ಪ್ರಕಾಶ್ ಬಂಟ್ವಾಳ್ ಹಾಗೂ ಅಮೃತಾ ಮುಖ್ಯಭೂಮಿಕೆಯಲ್ಲಿದ್ದು, ದೇವದಾಸ್ ಕಾಪಿಕಾಡ್, ನವೀನ್ ಡಿ. ಪಡೀಲ್, ಭೋಜರಾಜ್ ವಾಮಂಜೂರು, ಅರವಿಂದ್ ಬೋಳಾರ್, ಪುಷ್ಪರಾಜ್ ಬೊಳ್ಳಾರ್ ಮತ್ತು ಅರ್ಜುನ್ ಕಾಪಿಕಾಡ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಚಿತ್ರಕ್ಕೆ ಸಂತೋಷ್ ರೈ ಪಾತಾಜೆ ಹಾಗೂ ಚಂದ್ರಶೇಖರ್ ಕೆ.ಎಸ್.ಛಾಯಾ ಗ್ರಹಣ, ಸ್ಯಾಮ್ಯುಯೆಲ್ ಅಬಿ ಸಂಗೀತ ಸಂಯೋಜನೆ ನೀಡಿದ್ದಾರೆ.




# ಕಿಡಿ ಹೊತ್ತಿಸಿದ 'ಸ್ಪಾರ್ಕ್' ಮೊದಲ ಗೀತೆ..!

'ಶಕಲಕ ಭುಂ ಭೂಮ್..' ಎಂದು ಆರಂಭವಾದ ಹಾಡು ಸುದ್ದಿಗೋಷ್ಠಿಯ ವೇದಿಕೆಯಲ್ಲಿ ಕಿಚ್ಚು ಹತ್ತಿಸಿತು. ಕಾರಣ ಒಂದು ಕಡೆ ಹಾಡಿನಲ್ಲಿರುವ ಮೋಡಿ ಮತ್ತೊಂದೆಡೆ ಆ ಹಾಡಿಗೆ ಹೆಜ್ಜೆ ಹಾಕಿರುವ ಜೋಡಿ. ನಿರಂಜನ್ ಸುಧೀಂದ್ರ ಮತ್ತು ರಚನಾ ಇಂದರ್ ಹೆಜ್ಜೆ ಹಾಕಿರುವ ಅದ್ಧೂರಿ ಹಾಡಿನ ಅನಾವರಣ ಸಮಾರಂಭ ಈ ಎಲ್ಲದಕ್ಕೂ ಸಾಕ್ಷಿಯಾಯಿತು. ನಿರಂಜನ್ ಮತ್ತು ರಚನಾ ಇಂದರ್ ಮಸ್ತಾಗಿ ಕುಣಿದ ಗೀತೆ ನೋಡಿ ಸ್ಪಾರ್ಕ್‌ನಲ್ಲಿ ಖಳನಾಗಿ ನಟಿಸಿರುವ ಪ್ರೇಮ್ ಮೆಚ್ಚಿ ಮಾತನಾಡಿದರು. ನಿರಂಜನ್ ನಮ್ಮ ಕನ್ನಡದ ಪ್ರತಿಭೆ. ಅವರನ್ನು ಪರಭಾಷೆಯವರು ಹೈಜಾಕ್ ಮಾಡುವ ಮೊದಲು, ಕನ್ನಡದ ನಿರ್ಮಾಪಕರು ಉಳಿಸಿಕೊಳ್ಳಬೇಕು. ಈ ಚಿತ್ರದ ನಿರ್ಮಾಪಕರು ಒಂದು ಹಾಲಿವುಡ್ ಸಿನಿಮಾ ಮಾಡುವಷ್ಟು ಜ್ಞಾನ ಮತ್ತು ಶ್ರೀಮಂತಿಕೆ ಇರುವವರು. ಆದರೆ ಕನ್ನಡದ ಯುವ ನಾಯಕನಿಗಾಗಿ ಹತ್ತಾರು ಕೋಟಿ ಹಾಕಿ ಚಿತ್ರ ಮಾಡಿರುವುದನ್ನು ಮೆಚ್ಚಲೇಬೇಕು ಎಂದರು. ಸ್ಪಾರ್ಕ್‌ನಲ್ಲಿ ನಾಯಕ ನಿರಂಜನ್ ಪತ್ರಕರ್ತನಪಾತ್ರದಲ್ಲಿದ್ದು ನ್ಯಾಯದ ಹೋರಾಟ ನಡೆಸುವ ಪಾತ್ರದಲ್ಲಿ ಪ್ರತ್ಯಕ್ಷಗೊಳ್ಳಲಿದ್ದಾರೆ. ಚಿತ್ರದ ನಾಯಕ ನಿರಂಜನ್ ಮಾತನಾಡಿ, ಹಾಡನ್ನು ಉಪೇಂದ್ರ ಈಗಾಗಲೇ ಅವರಿಗೆ ತೋರಿಸಿದ ಬಗ್ಗೆ ಹೇಳಿಕೊಂಡರು. "ಹಾಡು ಚಿಕ್ಕಪ್ಪನಿಗೆ ತೋರಿಸಿದೆ. ದೊಡ್ಡ ಸ್ಟಾರ್ ಗೆ ಸಿಗುವಂಥ ಹಾಡು ನಿನಗೆ ಸಿಕ್ಕಿದೆ ಎಂದರು.



# ಸಂತೋಷ್ ಬಾಲರಾಜ್ ಕೊನೆಯ ಚಿತ್ರ 'ರತ್ನಗರ್ಭ'ದ ಫಸ್ಟ್ ಲುಕ್ ಬಿಡುಗಡೆ

ಗಣಪ, ಕರಿಯ 2 ಖ್ಯಾತಿಯ ದಿವಂಗತ ಸಂತೋಷ್ ಬಾಲರಾಜ್‌ರವರ ಕಡೆ ಸಿನಿಮಾ ರತ್ನಗರ್ಭ ಈಗ ಬಿಡುಗಡೆಗೆ ಸಿದ್ಧವಾಗುತ್ತಿದೆ. ಬಿಡುಗಡೆಯ ಪೂರ್ವಭಾವಿಯಾಗಿ ಆಗಸ್ಟ್ 5ರಂದು ಫಸ್ಟ್ ಲುಕ್ ಪೋಸ್ಟರ್ ಹಾಗೂ ಮೋಶನ್ ಪೋಸ್ಟರ್ ಬಿಡುಗಡೆಯಾಗಲಿದೆ. ಕರಿಯ 2 ಮತ್ತು ಗಣಪ ಚಿತ್ರದ ಖ್ಯಾತಿಯ ನಂತರ ಸಂತೋಷ್ ಬಾಲರಾಜ್ ಅವರ ಮತ್ತೊಂದು ಹಿರಿಮೆಯ ಚಿತ್ರ ಎಂದರೆ ಅದು ರತ್ನಗರ್ಭ ಚಿತ್ರ. ಈ ಚಿತ್ರದಲ್ಲಿ ಇದುವರೆಗೂ ಕಾಣದ ವಿಭಿನ್ನ ಪಾತ್ರದಲ್ಲಿ ಸಂತೋಷ ರವರು ಕಾಣಿಸಿಕೊಂಡಿದ್ದಾರೆ. ಪ್ರಖ್ಯಾತ ನಿರ್ಮಾಪಕರಾದ ದಿವಗಂತ ಆನೇಕಲ್ ಬಾಲರಾಜ್ ರವರ ಪುತ್ರ ಸ್ಯಾಂಡಲ್ ವುಡ್‌ನ ಯುವ ನಟರಾದ ಸಂತೋಷ್ ಬಾಲ್‌ರಾಜ್ ಅವರು ನಾಯಕನಟನಾಗಿ ನಟಿಸಿರುವ ಕೊನೆ ಸಿನಿಮಾ ರತ್ನಗರ್ಭ ಚಿತ್ರತಂಡ ಸಂತೋಷ್ ಬಾಲ್ ರಾಜ್ ಅವರ ಆಕಸ್ಮಿಕ ನಿಧನದ ನಂತರ ಇದೀಗ ಸಣ್ಣಪುಟ್ಟ ಶೂಟಿಂಗ್ ಪ್ಯಾಚ್ ವರ್ಕ್‌ಗಳನ್ನು ಪೂರ್ತಿ ಮಾಡಿಕೊಂಡು ಚಿತ್ರತಂಡವು VFX ಮುಖಾಂತರ ಎಲ್ಲಾ ಎಫರ್ಟ್ ಹಾಕಿ ಈಗ ಚಿತ್ರ ಚಿತ್ರವು ಕೊನೆ ಹಂತದ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದ್ದು ಬಿಡುಗಡೆಗೆ ಎಲ್ಲಾ ತಯಾರಿ ನಡೆಸಿಕೊಂಡಿದೆ. ನಟ ಸಂತೋಷರವರ ಮೊದಲನೇ ವರ್ಷದ ಪುಣ್ಯತಿಥಿ ಕಾರ್ಯ ಕ್ರಮದಲ್ಲಿ ಅವರ ಸವಿ ನೆನಪಿಗಾಗಿ ದಿನಾಂಕ 5–8–2026ರಂದು ಸಂಜೆ 7:00ಗೆ ಬೆಂಗಳೂರಿನ ರಾಗಿಗುಡ್ಡದ ಮೆಟ್ರೋ ಸ್ಟೇಷನ್ ಸಮೀಪದಲ್ಲಿರುವ ಮೈದಾನದಲ್ಲಿ ಮೊದಲನೇ ವರ್ಷದ ಪುಣ್ಯತಿಥಿಯ ಕಾರ್ಯಕ್ರಮದಲ್ಲಿ ಸಂತೋಷ್ ಬಾಲರಾಜ್ ರವರ ಕೊನೆ ಚಿತ್ರ ವಾದ ರತ್ನಗರ್ಭ ಚಿತ್ರದ ಮೊದಲ ಫಸ್ಟ್ ಲುಕ್ ಪೋಸ್ಟರ್ ಹಾಗೂ ಮೋಷನ್ ಪೋಸ್ಟರ್ ಬಿಡುಗಡೆ ಮಾಡಲು ಚಿತ್ರ ತಂಡವು ಸಜ್ಜಾಗಿದೆ.



# ಅಮೆರಿಕಾ ಅಮೆರಿಕಾ 2ಕ್ಕೆ ಫ್ರೆಂಡ್‌ಶಿಪ್ ಡೇ ಉಡುಗೊರೆ

ಡಾ.ನಾಗತಿಹಳ್ಳಿ ಚಂದ್ರಶೇಖರ್ ಮತ್ತು ಮನೋಮೂರ್ತಿ ಅವರ ಜೋಡಿ ಕನ್ನಡ ಸಿನಿಪ್ರೇಮಿಗಳ ಮನದಲ್ಲಿ ಸದಾ ವಿಶೇಷ ಸ್ಥಾನ ಪಡೆದಿದೆ. ಅಮೆರಿಕಾ ಅಮೆರಿಕಾ, ನನ್ನ ಪ್ರೀತಿಯ ಹುಡುಗಿ, ಅಮೃತಧಾರೆ ಮತ್ತು ಮಾತಾಡ್ ಮಾತಾಡ್ ಮಲ್ಲಿಗೆ ಸೇರಿದಂತೆ ಹಲವು ಚಿತ್ರಗಳ ಮೂಲಕ ಈ ಜೋಡಿ ನೆನಪಿನಲ್ಲಿ ಉಳಿಯುವ ಸಂಗೀತವನ್ನು ನೀಡಿದೆ. ಈಗ ಆ ಪ್ರಿಯ ಜೋಡಿ ಮತ್ತೆ ಅಮೆರಿಕಾ ಅಮೆರಿಕಾ 2 ಮೂಲಕ ಒಂದಾಗುತ್ತಿದೆ. 'ಫ್ರೆಂಡ್ ಶಿಪ್ ಡೇ'ಯಾದ ಆಗಸ್ಟ್ 2ರಂದು ತಮ್ಮ ಸ್ನೇಹದ ನೆನಪನ್ನು ಮತ್ತಷ್ಟು ಅರ್ಥಪೂರ್ಣವಾಗಿ ಆಚರಿಸಲು ವಿಶೇಷ ಹೆಜ್ಜೆ ಇಟ್ಟಿದ್ದಾರೆ. ಅಮೆರಿಕಾ ಅಮೆರಿಕಾ 2 ಚಿತ್ರದ ಹಾಡುಗಳು ಮತ್ತು ಹಿನ್ನೆಲೆ ಸಂಗೀತವನ್ನು ಮನೋಮೂರ್ತಿ ಮ್ಯೂಸಿಕ್ ಚಾನೆಲ್‌ನಲ್ಲಿ ಬಿಡುಗಡೆ ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ. ಸ್ನೇಹ ಮತ್ತು ಸೃಜನಶೀಲ ಸಹಯೋಗಕ್ಕೆ ಗೌರವ ಸಲ್ಲಿಸುವಂತೆ ಈ ಪ್ರಕಟಣೆ ಹೊರಬಿದ್ದಿದೆ. ಈ ಚಿತ್ರದಲ್ಲಿ ನಿರೂಪ್ ಭಂಡಾರಿ, ಶಾನ್ವಿ ಶ್ರೀವಾಸ್ತವ ಮತ್ತು ಪೃಥ್ವಿ ಅಂಬರ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.



# 'ಮಹಾನ್' ಫಸ್ಟ್ ಲುಕ್ ಅನಾವರಣ ಮಾಡಿದ ಚಿತ್ರತಂಡ

ಕನ್ನಡದಲ್ಲಿ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನಿರ್ದೇಶಿಸಿರುವ ಪಿ.ಸಿ.ಶೇಖರ್ ನಿರ್ದೇಶನದ, ಆಕಾಶ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬೂದೂರು ಅವರು ನಿರ್ಮಿಸುತ್ತಿರುವ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಜನಪ್ರಿಯರಾಗಿರುವ ವಿಜಯ ರಾಘವೇಂದ್ರ ನಾಯಕರಾಗಿ ನಟಿಸು ತ್ತಿರುವ 'ಮಹಾನ್' ಚಿತ್ರದ ಪ್ರಮು ಖಪಾತ್ರದಲ್ಲಿ 'ರಂಗಿತರಂಗ' ಖ್ಯಾತಿಯ ರಾಧಿಕಾ ನಾರಾಯಣ್ ಹಾಗೂ ಖ್ಯಾತ ನಟ ಮಿತ್ರ ಅಭಿನಯಿಸಿದ್ದಾರೆ. ಇತ್ತೀಚೆಗೆ 'ಮಹಾನ್' ಚಿತ್ರತಂಡ ರಾಧಿಕಾ ನಾರಾಯಣ್ ಹಾಗೂ ಮಿತ್ರ ಅವರ ಫಸ್ಟ್ ಲುಕ್ ಬಿಡುಗಡೆ ಮಾಡಿದೆ. 'ಮಹಾನ್' ಚಿತ್ರದಲ್ಲಿ ನನ್ನದು ನರ್ಸ್ ಪಾತ್ರ. ಪಕ್ಕಾ ಗ್ರಾಮೀಣ ಹೆಣ್ಣು ಮಗಳ ಪಾತ್ರದಲ್ಲಿ ಮೊದಲ ಬಾರಿಗೆ ಕಾಣಿಸಿಕೊಂಡಿದ್ದೇನೆ. ನಾನು ನಗರ ಪ್ರದೇಶದಲ್ಲಿ ಬೆಳೆದವಳು ಎಂದು ನಟಿ ರಾಧಿಕಾ ನಾರಾಯಣ್ ಹೇಳಿದ್ದಾರೆ.



# 'ಭಾವಾಂತರ' 'ಮೊದಮೊದಲಿದು' ಮೆಲೋಡಿ ಹಾಡು ರಿಲೀಸ್..

ಕನ್ನಡ ಚಿತ್ರರಂಗದಲ್ಲಿ ಬಾಲನಟನಾಗಿ ಹಾಗೂ ಸಂಗೀತ ನಿರ್ದೇಶಕನಾಗಿ ಗುರುತಿಸಿಕೊಂಡಿರುವ ಬಹುಮುಖ ಪ್ರತಿಭೆ ಕಾರ್ತಿಕ್ ಶರ್ಮಾ ಈಗ 'ಭಾವಾಂತರ' ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಬಡ್ತಿ ಪಡೆದಿದ್ದಾರೆ. ಈ ಸಿನಿಮಾದ 'ಮೊದಮೊದಲಿದು' ಎಂಬ ಮೆಲೋಡಿ ಹಾಡು ಇತ್ತೀಚೆಗೆ ಬಿಡುಗಡೆಯಾಗಿದ್ದು, ಪ್ರೇಕ್ಷಕರಿಂದ ಭಾರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಕನ್ನಡದ ಹೆಮ್ಮೆಯ ನಿರ್ಮಾಣ ಸಂಸ್ಥೆಯಾದ 'ಹೊಂಬಾಳೆ ಫಿಲ್ಮ್ಸ್' ತನ್ನದೇ ಆದ 'ಹೊಂಬಾಳೆ ಮ್ಯೂಸಿಕ್' ಆಡಿಯೋ ಲೇಬಲ್ ಮೂಲಕ ಈ ಚಿತ್ರದ ಆಡಿಯೋ ಹಕ್ಕುಗಳನ್ನು ಪಡೆದುಕೊಂಡಿದ್ದು, ಹೊಸಬರ ಈ ವಿಭಿನ್ನ ಪ್ರಯತ್ನಕ್ಕೆ ಸಾಥ್ ನೀಡಿದೆ. ನಿರ್ದೇಶನದ ಜೊತೆಗೆ ಸಂಗೀತ ಸಂಯೋಜನೆಯ ಜವಾಬ್ದಾರಿಯನ್ನೂ ಸ್ವತಃ ಕಾರ್ತಿಕ್ ಶರ್ಮಾ ಅವರೇ ಹೊತ್ತಿದ್ದಾರೆ.



# ನಟ ಕಾರ್ತಿ – ನಿರ್ದೇಶಕ ಮೋಹನ್ ರಾಜ ಜೋಡಿ ಹೊಸ ಸಿನಿಮಾ

ತಮಿಳು ಚಿತ್ರರಂಗದಲ್ಲಿ ಹಲವು ಸೂಪರ್‌ಹಿಟ್ ಸಿನಿಮಾಗಳನ್ನು ನೀಡಿ ಸೌಂಡ್ ಮಾಡಿರುವ ಖ್ಯಾತ ನಿರ್ಮಾಣ ಸಂಸ್ಥೆ 'ಪ್ರಿನ್ಸ್ ಪಿಕ್ಚರ್ಸ್', ತನ್ನ ಹೊಸ ಹೊಸ ಸಿನಿಮಾವನ್ನು ಅಧಿಕೃತವಾಗಿ ಪ್ರಕಟಿಸಿದೆ. 'ಸಿಂಗಂ2' ಮತ್ತು 'ಸರ್ದಾರ್' ನಂತಹ ಯಶಸ್ವಿ ಚಿತ್ರಗಳನ್ನು ನಿರ್ಮಾಣ ಮಾಡಿರುವ ನಿರ್ಮಾಪಕ ಎಸ್. ಲಕ್ಷ್ಮಣ್ ಕುಮಾರ್, ಈ ಬಾರಿ ನಟ ಕಾರ್ತಿ ಹಾಗೂ ಖ್ಯಾತ ನಿರ್ದೇಶಕ ಮೋಹನ್ ರಾಜ ಅವರ ಜೊತೆಗೆ ಹೊಸ ಕೌಟುಂಬಿಕ ಮನರಂಜನಾ ಚಿತ್ರವನ್ನು ಕೈಗೆತ್ತಿಕೊಂಡಿದ್ದಾರೆ. ಕುಟುಂಬ, ಭಾವನಾತ್ಮಕ ಸನ್ನಿವೇಶಗಳು ಮತ್ತು ನಾಯಕತ್ವದ ಸಾಹಸವನ್ನು ಒಳಗೊಂಡ ವಿಶಿಷ್ಟ ಕಥಾಹಂದರ ಹೊಂದಿದೆ.



# ಸೆಪ್ಟೆಂಬರ್ 18ರಂದು ತೆರೆಗೆ ಬರಲಿದೆ 'ಅಮರ್ಥ'

ಪಂಚರಂಗಿ ಫಿಲಂಸ್ ಲಾಂಛನದಲ್ಲಿ ಡಾ॥ ಕನ್ಯಾನ ಸದಾಶಿವ ಶೆಟ್ಟಿ ಹಾಗೂ ಗುರು ಹೆಗ್ಡೆ ನಿರ್ಮಿಸಿರುವ, ಗುರು ಹೆಗ್ಡೆ ಹಾಗೂ ವಿನಯ್ ಪ್ರೀತಮ್ ನಿರ್ದೇಶನದ ಮತ್ತು ಶ್ರೀನಗರ ಕಿಟ್ಟಿ–ಮೇಘನಾರಾಜ್ ನಾಯಕ–ನಾಯಕಿಯಾಗಿ ನಟಿಸಿರುವ "ಅಮರ್ಥ" ಚಿತ್ರ ಇದೇ ಸೆಪ್ಟೆಂಬರ್ 18ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಚಿತ್ರದ ಬಿಡುಗಡೆ ದಿನಾಂಕ ಘೋಷಣೆ ಹಾಗೂ ಪತ್ರಿಕಾಗೋಷ್ಠಿ ಇತ್ತೀಚೆಗೆ ನಡೆಯಿತು. ಹಿರಿಯ ನಟ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಉಪಾಧ್ಯಕ್ಷ ಸುಂದರರಾಜ್ ಅವರು ಚಿತ್ರದ ಬಿಡುಗಡೆ ದಿನಾಂಕವುಳ್ಳ ಮೋಷನ್ ಪೋಸ್ಟರ್ ಅನ್ನು ಅನಾವರಣ ಮಾಡಿದರು. ತಮ್ಮಣ್ಣ ಶೆಟ್ಟಿ ಅವರು ಸಹ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಹಾಡಿನ ಪ್ರದರ್ಶನ ಹಾಗೂ ಮೋಷನ್ ಪೋಸ್ಟರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಹಿರಿತೆರೆ ಹಾಗೂ ಕಿರುತೆರೆಯ ಕಲಾವಿದನಾಗಿ ಎರಡು ದಶಕಗಳಾಗಿದೆ. ವಿನಯ್ ಪ್ರೀತಮ್ ಹಾಗೂ ನಾನು ಇಬ್ಬರು ಜಂಟಿಯಾಗಿ ನಿರ್ದೇಶನ ಮಾಡಿದ್ದೇವೆ ಎಂದರು.



# 'ರೋಲೆಕ್ಸ್' ಚಿತ್ರಕ್ಕೆ ಸೆನ್ಸಾರ್ ಅಸ್ತು

ಮಧು ಫಿಲಂ ಸರ್ಕ್ಯುಯಿಟ್ಸ್ ಸಂಸ್ಥೆ ಲಾಂಛನದಡಿಯಲ್ಲಿ ಅಂಬಟಿ ಮಧು ಮೋಹನ್ ನಿರ್ಮಿಸಿರುವ, ಶ್ರೀನಿವಾಸ್ ಮಂಡ್ಯ ನಿರ್ದೇಶಿಸಿರುವ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ನಟ ಕೋಮಲ್ ಕುಮಾರ್ ನಾಯಕರಾಗಿ ನಟಿಸಿರುವ "ರೋಲೆಕ್ಸ್" ಚಿತ್ರವನ್ನು ಪ್ರಾದೇಶಿಕ ಸೆನ್ಸಾರ್ ಮಂಡಳಿ ವೀಕ್ಷಿಸಿ U/A ಪ್ರಮಾಣಪತ್ರ ನೀಡಿದೆ. ಉತ್ತಮ ಮನೋರಂಜನೆಯ ಚಿತ್ರ ಎಂದು ಸೆನ್ಸಾರ್ ಮಂಡಳಿ ಚಿತ್ರದ ಬಗ್ಗೆ ಮೆಚ್ಚುಗೆಯ ಮಾತುಗಳಾಡಿದೆ. ಬಹು ನಿರೀಕ್ಷಿತ ಈ ಚಿತ್ರ ಸದ್ಯದಲ್ಲೇ ತೆರೆಗೆ ಬರಲಿದೆ. ಥ್ರಿಲ್ಲರ್ ಹಾಗೂ ಕಾಮಿಡಿ ಕಥಾಹಂದರ ಹೊಂದಿರುವ ಈ ಚಿತ್ರವನ್ನು ಯಾವುದೇ ವಯಸ್ಸಿನ ಮಿತಿಯಿಲ್ಲದೆ ಪ್ರತಿಯೊಬ್ಬರು ಕುಟುಂಬ ಸಮೇತ ನೋಡಬಹುದು. ಚಿತ್ರದಲ್ಲಿ ಮನೋರಂಜನೆಯ ಪ್ರಧಾನ. ನೋಡುಗರಿಗೆ ಇದೊಂದು ನಗೆಯ ಹಬ್ಬ. ಕೋಮಲ್ ಕುಮಾರ್ ಅವರ ಸ್ಟೈಲಿಶ್ ಲುಕ್‌ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.






# ಸಿನಿಲೋಕದ ಧ್ರುವತಾರೆ ಘಂಟಸಾಲ ವೆಂಕಟೇಶ್ವರರಾವ್..



ಭಾರತೀಯ ಹಾಗೂ ದಕ್ಷಿಣ ಭಾರತದ ಚಿತ್ರರಂಗ ಕಂಡ ಅಪ್ರತಿಮ ಗಾಯಕ ಮತ್ತು ಶ್ರೇಷ್ಠ ಸಂಗೀತ ನಿರ್ದೇಶಕರಾದ ಘಂಟಸಾಲ ವೆಂಕಟೇಶ್ವರರಾವ್ ಆಂಧ್ರಪ್ರದೇಶದ ಕೃಷ್ಣಾ ಜಿಲ್ಲೆಯ ದೋವೂರು ಗ್ರಾಮದಲ್ಲಿ ವೃತ್ತಿಪರ ಗಾಯಕರಾಗಿದ್ದ ಘಂಟಸಾಲ ಸೂರಯ್ಯ ಅವರ ತೆಲುಗು ಬ್ರಾಹ್ಮಣ ಕುಟುಂಬದಲ್ಲಿ 1922ರ ಡಿಸೆಂಬರ್ 4ರಂದು ಜನಿಸಿದರು. ತನ್ನ ಅಪ್ರಪತಿಮ ಗಾಯನದಿಂದ ಘಂಟ ಸಾಲ ವೆಂಕಟೇಶ್ವರರಾವ್ 'ಘಂಟಸಾಲ' ಎಂದೇ ಏಕನಾಮದಿಂದ ಪ್ರಸಿದ್ಧರಾಗಿದ್ದರು. ಚಿಕ್ಕಂದಿನಿಂದಲೇ ಸಂಗೀತದತ್ತ ಅಪಾರ ಆಸಕ್ತಿ ಹೊಂದಿದ್ದ ಇವರು ಬಾಲ್ಯದಲ್ಲಿ ತಮ್ಮ ತಂದೆಯ ತರಂಗಗಳಿಗೆ ನೃತ್ಯ ಮಾಡುತ್ತಿದ್ದರು. ಮಗುವಾಗಿದ್ದಾಗ ತಂದೆಯನ್ನು ಕಳೆದುಕೊಂಡ ಘಂಟಸಾಲರು ತಮ್ಮ ತಾಯಿಯ ಚಿಕ್ಕಪ್ಪನ ಆಸರೆಯಲ್ಲಿ ಬೆಳೆದರು. ಅವರು ಪಟ್ರಿಯಾಣಿ ಸೀತಾರಾಮ ಶಾಸ್ತ್ರಿಗಳಿಂದ ಔಪಚಾರಿಕ ತರ ಬೇತಿ ಪಡೆದು, ವಿಜಯನಗರದ ಮಹಾರಾಜರ ಸರ್ಕಾರಿ ಸಂಗೀತ ಮತ್ತು ನೃತ್ಯ ಕಾಲೇಜಿನಲ್ಲಿ ಶಾಸ್ತ್ರೀಯ ಸಂಗೀತವನ್ನು ಕರಗತ ಮಾಡಿ ಕೊಂಡರು. ಕೇವಲ ಗಾಯಕರಾಗಿ ಮಾತ್ರ ವಲ್ಲದೆ ದೇಶಭಕ್ತರಾಗಿಯೂ ಗುರುತಿಸಿ ಕೊಂಡಿದ್ದ ಘಂಟಸಾಲ ಅವರು, 1942ರ 'ಕ್ವಿಟ್ ಇಂಡಿಯಾ' ಚಳವಳಿಯಲ್ಲಿ ಸಕ್ರಿಯ ವಾಗಿ ಭಾಗವಹಿಸಿ 18 ತಿಂಗಳುಗಳ ಕಾಲ ಬಳ್ಳಾರಿಯ ಅಲಿಪುರ ಜೈಲಿನಲ್ಲಿ ಬಂಧಿ ಯಾಗಿದ್ದರು. ಜೈಲಿನಿಂದ ಹೊರಬಂದ ನಂತರ ಮದ್ರಾಸ್‌ಗೆ ತೆರಳಿದ ಇವರು, ಗೀತರಚನೆಕಾರ ಸಮುದ್ರಾಲ ಸೀನಿಯರ್ ಅವರನ್ನು ಭೇಟಿ ಯಾದರು. ಇವರ ಧ್ವನಿಗೆ ಪ್ರಭಾವಿತರಾದ ಸಮುದ್ರಾಲ ಅವರು ಮದ್ರಾಸ್ ಚಲನ ಚಿತ್ರೋದ್ಯಮಕ್ಕೆ ಇವರನ್ನು ಪರಿಚಯಿಸಿದರು. ಪ್ರಸಿದ್ಧ ಗಾಯಕರಾಗುವ ಮುನ್ನವೇ ನಿಪುಣ ಕರ್ನಾಟಕ ಸಂಗೀತ ಗಾಯಕರಾಗಿದ್ದ ಇವರಿಗೆ ಆಲ್ ಇಂಡಿಯಾ ರೇಡಿಯೊದಿಂದ ಮೊದಲ ಬ್ರೇಕ್ ದೊರೆಯಿತು. ನಂತರ, ಕೋರಸ್ ಗಾಯಕರಾಗಿ ಪ್ರತಿಭಾ ಫಿಲಂಸ್‌ನ 'ಸೀತಾ ರಾಮ ಜನನಂ' ಹಾಗೂ 1947ರಲ್ಲಿ 'ರತ್ನ ಮಾಲ' ಚಿತ್ರದ ಮೂಲಕ ಗಾಯಕರಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಸಂಗೀತ ನಿರ್ದೇಶಕರಾಗಿ ಘಂಟಸಾಲ ಅವರ ಮೊದಲ ಚಿತ್ರ 'ಲಕ್ಷಮ್ಮ' ಹಾಗೂ 1949ರ 'ಮನದೇಶಂ' (ಎನ್.ಟಿ.ರಾಮರಾವ್ ಅವರ ಮೊದಲ ಚಿತ್ರ) ಚಿತ್ರಕ್ಕೆ ಪೂರ್ಣ ಸಮಯದ ಸಂಗೀತ ನಿರ್ದೇಶಕರಾಗಿ ಕೆಲಸ ಮಾಡಿ ಪ್ರಸಿದ್ಧಿ ಪಡೆದರು. ಹಾಡುಗಳನ್ನು ಹಾಡುವ ನಟನಿಗೆ ಸರಿಹೊಂದುವಂತೆ ಗಾಯನ ಪಿಚ್ ಮತ್ತು ಶೈಲಿಯನ್ನು ಬದಲಾಯಿಸುವ ತಂತ್ರವನ್ನು ಪರಿಚಯಿಸಿದ ಇವರು 'ಪದ್ಯಂ' ನಿರೂಪಣೆ ಯಲ್ಲಿ ಅಪ್ರತಿಮರಾಗಿದ್ದರು. ತೆಲುಗು, ಕನ್ನಡ, ತಮಿಳು, ಮಲಯಾಳಂ, ತುಳು ಮತ್ತು ಹಿಂದಿ ಸೇರಿದಂತೆ ಹಲವು ಭಾಷೆಗಳಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಗೀತೆಗಳನ್ನು ಹಾಡಿ, ನೂರಕ್ಕೂ ಹೆಚ್ಚು ಚಿತ್ರಗಳಿಗೆ ಸಂಗೀತ ಸಂಯೋಜಿಸಿದ ಕೀರ್ತಿ ಇವರದ್ದಾಗಿದೆ. ಪಾತಾಳ ಭೈರವಿ, ಮಾಯಾಬಜಾರ್, ಲವ ಕುಶ, ಪಾಂಡವ ವನವಾಸಂ, ರಹಸ್ಯಂ, ಗುಂಡಮ್ಮ ಕಥಾ, ಪೆಲ್ಲಿ ಚೇಸಿ ಚೂಡು ಮುಂತಾದ ಜನಪ್ರಿಯ ಚಿತ್ರಗಳ ಜೊತೆಗೆ ಹಿಂದಿ ಚಲನಚಿತ್ರ 'ಝುಂಡಾ ಊಂಚಾ ರಹೇ ಹಮಾರಾ' (1964) ಚಿತ್ರಕ್ಕೂ ಸಂಗೀತ ನಿರ್ದೇಶನ ನೀಡಿದ್ದಾರೆ. ಕನ್ನಡದಲ್ಲಿ 'ಭಕ್ತ ಕನಕದಾಸ', 'ವಾಲ್ಮೀಕಿ', 'ಬಭ್ರುವಾಹನ', 'ಸತ್ಯ ಹರಿಶ್ಚಂದ್ರ' ಮುಂತಾದ ಜನಪ್ರಿಯ ಚಿತ್ರಗಳಲ್ಲಿ ಇವರು ಹಾಡಿದ 'ಕುಲ ಕುಲವೆಂದು ಹೊಡೆದಾಡದಿರಿ' ಮುಂತಾದ ಗೀತೆಗಳು ಎಂದೆಂದಿಗೂ ಕನ್ನಡಿಗರ ಮನದಲ್ಲಿ ಅಳಿಯದೆ ಅಮರವಾಗಿ ಉಳಿದಿವೆ. 'ಜಗದೇಕ ವೀರುಣಿ ಕಥಾ' (1961) ಚಿತ್ರದ "ಶಿವ ಶಂಕರಿ" ಹಾಡನ್ನು ಒಂದೇ ಟೇಕ್‌ನಲ್ಲಿ ಹಾಡಿದ್ದು ಇವರ ಅಪಾರ ಶಾಸ್ತ್ರೀಯ ಸಂಗೀತ ಜ್ಞಾನಕ್ಕೆ ಸಾಕ್ಷಿಯಾಗಿದೆ. ಘಂಟಸಾಲ ಅವರು ತಿರುಮಲ ತಿರುಪತಿ ದೇವಸ್ಥಾನದ ಆಸ್ಥಾನ ಗಾಯಕರಾಗಿ ಸೇವೆ ಸಲ್ಲಿಸಿದರು. 15ನೇ ಶತಮಾನದ ಸಂತ ಕವಿ ಅನ್ನಮಾಚಾರ್ಯರ ನಂತರ, ಭಗವಾನ್ ಮೂಲ ವಿರಾಟ್ ಬಳಿಯ ತಿರುಮಲ ವೆಂಕಟೇಶ್ವರ ದೇವಾಲಯದ ಒಳಗೆ ಭಕ್ತಿ ಗೀತೆಗಳನ್ನು ಪ್ರದರ್ಶಿಸಿದ ಏಕೈಕ ಗಾಯಕ ರಾಗಿದ್ದಾರೆ. ಇವರ ಧ್ವನಿಯಲ್ಲಿ ಮೂಡಿಬಂದ 'ಸಂಪೂರ್ಣ ಭಗವದ್ಗೀತೆ' ಧ್ವನಿಸುರುಳಿಯು ವಿಶ್ವದಾದ್ಯಂತ ಅಪಾರ ಜನಪ್ರಿಯತೆ ಗಳಿಸಿ ದ್ದು, ಈಗಲೂ ತಿರುಮಲ ದೇವಸ್ಥಾನದಲ್ಲಿ ಪ್ರತಿದಿನ ಕೇಳಿಬರುತ್ತದೆ. ಇವರ ಈ ಅದ್ಭುತ ಕೊಡುಗೆಗಾಗಿ ಭಾರತ ಸರ್ಕಾರವು 1970ರಲ್ಲಿ ಭಾರತದ ನಾಲ್ಕನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಪದ್ಮಶ್ರೀ' ನೀಡಿ ಗೌರವಿಸಿತು. ಆಂಧ್ರಪ್ರದೇಶ ಸರ್ಕಾರವು ಫೆಬ್ರವರಿ, 1–1970 ರಂದು ಇವರ ವೃತ್ತಿಜೀವನದ 25 ವರ್ಷಗಳ ರಜತ ಮಹೋತ್ಸವವನ್ನು ಹೈದರಾಬಾದ್‌ನಲ್ಲಿ ವಿಜೃಂಭಣೆಯಿಂದ ಆಚರಿಸಿತ್ತು. ಘಂಟಸಾಲ ಅವರು ಯುನೈಟೆಡ್ ಸ್ಟೇಟ್ಸ್, ಇಂಗ್ಲೆಂಡ್, ಜರ್ಮನಿ ಮತ್ತು ವಿಶ್ವಸಂಸ್ಥೆಯ ಸಂಸ್ಥೆ ಗಳಿಗಾಗಿಯೂ ಪ್ರದರ್ಶನ ನೀಡಿದ್ದಾರೆ. ಇವರ ಸ್ಮರಣಾರ್ಥವಾಗಿ ಭಾರತ ಸರ್ಕಾರವು 2003 ರಲ್ಲಿ ಮತ್ತು 2014ರಲ್ಲಿ ಅಂಚೆ ಇಲಾಖೆಯು ಅಂಚೆ ಚೀಟಿಗಳನ್ನು ಬಿಡುಗಡೆ ಮಾಡಿವೆ. ವಿವಿಧ ಸಂಗೀತ ಕಾಲೇಜುಗಳು ಮತ್ತು 'ಘಂಟಸಾಲ ಮೆಲೋಡಿ ಕಿಂಗ್ ಪ್ರಶಸ್ತಿ', 'ಘಂಟಸಾಲ ರಾಷ್ಟ್ರೀಯ ಪ್ರಶಸ್ತಿ', 'ಕಲಾ ಪ್ರದರ್ಶನ ನೀಡಿ ಘಂಟಸಾಲ ಪುರಸ್ಕಾರ'ಗಳ ಮೂಲಕ ಇವರ ಹೆಸರನ್ನು ಅಮರ ಗೊಳಿಸಿದೆ. ವೈಯಕ್ತಿಕ ಜೀವನದಲ್ಲಿ, ಘಂಟ ಸಾಲ ಅವರು ಸಾವಿತ್ರಿ ಮತ್ತು ಸರಳಾ ದೇವಿ ಅವರನ್ನು ವಿವಾಹವಾಗಿದ್ದು, 4 ಹೆಣ್ಣು ಮಕ್ಕಳು, 4 ಪುತ್ರರರನ್ನು ಹೊಂದಿದ್ದರು. ತಮ್ಮನ್ನು ಖಾಯಂ ಕಲಾವಿದನನ್ನಾಗಿ ನೇಮಿ ಸಿದ 'ವಿಜಯಾ ಪ್ರೊಡಕ್ಷನ್ಸ್' ಸಂಸ್ಥೆಗೆ ಕೃತಜ್ಞತೆ ಸಲ್ಲಿಸಲು ಘಂಟಸಾಲ ಅವರು ತಮ್ಮ ಹಿರಿಯ ಮಗನಿಗೆ 'ವಿಜಯ' ಎಂದು ಹೆಸರಿಟ್ಟಿದ್ದರು. ತಮ್ಮ 51ನೇ ವಯಸ್ಸಿನಲ್ಲಿ, ಫೆಬ್ರವರಿ 11, 1974ರಂದು ಚೆನ್ನೈನ ಆಸ್ಪತ್ರೆಯಲ್ಲಿ ಹೃದಯ ಸ್ತಂಭನದಿಂದ ನಿಧನರಾದರು. ಸಾವಿನ ಹಿಂದಿನ ದಿನವೂ ಆಸ್ಪತ್ರೆಯ ಹಾಸಿಗೆಯಿಂದ 'ಭದ್ರಾಚಲ ರಾಮದಾಸು ವೈಭವಂ' ಸಾಕ್ಷ್ಯ ಚಿತ್ರಕ್ಕೆ ಹಾಡನ್ನು ರೆಕಾರ್ಡ್ ಮಾಡಿದ್ದರು. ತಮ್ಮ ಅದ್ಭುತ ಗಾಯನದಿಂದ ಹೆಸರು ಮಾಡಿ ರುವ ಅವರ ಪ್ರತಿಮೆಯನ್ನು ಗುಂಟೂರಿನಲ್ಲಿ ಸ್ಥಾಪಿಸಲಾಗಿತ್ತು. ಸಮ್ಮೋಹನಗೊಳಿಸುವ ಧ್ವನಿಯ ಮೂಲಕ ಇಂದಿಗೂ ಪ್ರತಿಯೊಬ್ಬ ಸಂಗೀತ ಪ್ರೇಮಿಯ ಹೃದಯದಲ್ಲಿ 'ಗಾನ ಗಂಧರ್ವ'ರಾಗಿ ಜೀವಂತವಾಗಿರುವ ಘಂಟ ಸಾಲ ವೆಂಕಟೇಶ್ವರ ರಾವ್ ಅವರು ನಮ್ಮ ಕರಾವಳಿ ತರಂಗಿಣಿ ಪತ್ರಿಕೆಯ ಈ ವಾರದ ಸಿನಿಲೋಕದ ಧ್ರುವತಾರೆಯಾಗಿದ್ದಾರೆ.











ಎನ್ನಾರ್ ಕೆ ವಿಶ್ವನಾಥ್
ENNAR K VISHWANATH







KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021